ಸಂಪುಟ : 9 ಸಂಚಿಕೆ 109 ಪುಟ : 4 ಬೆಲೆ: 3.00 ಶನಿವಾರ ಜೂನ 1 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 109 Pages : 4 Price : 3.00 Saturday June 1 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂನ್ 1ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 16ರಲ್ಲಿ ಡಿ.ಸಿ.ಮಿಲ್ ರಸ್ತೆ, ಡೋರ್‌ಗಲ್ಲಿ ವಾರ್ಡ್ ನಂ. 22ರಲ್ಲಿ ಗಂಗಿಮಡಿ, ಅಕ್ಕಿಯವರ ಲೈನ್, ಸಫಾರಿಯವರ ಲೈನ್, ನಿಂಗಪ್ಪ ಲೈನ್, ಪಾಮಡೆ ಅವರ ಲೈನ್, ಗಾರ್ಡನ್ ಲೈನ್, ವಾರ್ಡ್ ನಂ. 6-5ರಲ್ಲಿ ಹಳ್ಳಿಕೇರಿ ಪ್ಲಾಟ್, ಚನ್ನಪ್ಪಗೌಡ್ರ ಲೈನ್, ಖಾನಾಪೂರ ಲೈನ್, ವರವಿಯವರ ಲೈನ್, ಕೊಟಗಿ ಮಾಸ್ತರ್ ಲೈನ್, ಸ್ವಾಮಿಯವರ ಲೈನ್, ಪಾಟೀಲರ ಲೈನ್, ಹನಮಪ್ಪನ ಗುಡಿ ಲೈನ್, ಜೇಮ್ಸ್ ಲೈನ್,

ವಾರ್ಡ್ ನಂ. 12ರಲ್ಲಿ ಇರಾನಿ ಕಾಲೊನಿ ಲೈನ್, ಗಣೇಶಗುಡಿ ಲೈನ್, ಕರಿಯಮ್ಮನ ಕಲ್ಲು ಕೆಲವು ಉಳಿದ ಭಾಗಗಳು, ವಾರ್ಡ್ ನಂ. 28ರಲ್ಲಿ ಕೃಷ್ಣಾ ಟ್ಯೂಶನ್ ಲೈನ್, ಸೊಲ್ಲಾಪಟ್ಟಿ ಅವರ ಲೈನ್, ಅಪಾರ್ಟಮೆಂಟ್ ಲೈನ್, ಕಟ್ಟಿ ಟೀಚರ್ ಲೈನ್, ಎಸ್.ಎಸ್.ಪಾಟೀಲ, ಗವಾಯಿಗಳ ಆಶ್ರಮ ಮುಂದಿನ ಭಾಗ,

ವಾರ್ಡ್ ನಂ. 17,18,19, 25 ಕಾಗದಗೇರಿ, ಭಟ್ಟರ್ ಲೈನ್, ಗುಂಜೀನವರ ಲೈನ್, ಪಿ&ಟಿ. ರೋಡ್, ಮದ್ಲಿ ಓಣಿ, ಹೊಸ ಲೈನ್, ಕೊನೇರಿ ಹೊಂಡ ಹಳೇ ಲೈನ್, ಭಾವಿಯವರ ಲೈನ್, ಹಾವನೂರ ಲೈನ್, ನಮಾಜಿ ಮೇಂಬರ್ ಲೈನ್, ವಾರ್ಡ್ ನಂ. 7ರಲ್ಲಿ ಕೊಚ್ಚಗಲ್ಲಿ, ಆಕಾಶಗಲ್ಲಿ, ಹಳೆ ಪೋಸ್ಟ್ ಆಫೀಸ್ ಲೈನ್, ಪಟ್ಟಣಶೆಟ್ಟರ ಲೈನ್, ಹುಚ್ಚನಗೌಡ್ರ ಓಣಿ, ವಾಲ್ಮೀಕಿನಗರ, ಗ್ವಾಡಿಯವರ ಲೈನ್, ಬಾರಕೇರ ಲೈನ್, ಕಿಲ್ಲಾ ಓಣಿ, ವಾರ್ಡ್ ನಂ. 2 ಸ್ಲ್ಯಾಬ್ ಮನೆ, ವೆಲ್ ಫೇರ್, ವಾರ್ಡ್ ನಂ. 5ರಲ್ಲಿ ನರಸಾಪೂರ ಲೈನ್, ಆಶ್ರಯ ಕಾಲೊನಿ

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಅವರ ಜಿಲ್ಲಾ ಪ್ರವಾಸ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ ಉಪಲೋಕಾಯುಕ್ತರಾದ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಅವರು ಜೂನ್ 14 ರಿಂದ 16 ರವರೆಗೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದು ಕಾರ್ಯಕ್ರಮಗಳ ವಿವರ ಕೆಳಗಿನಂತಿದೆ.

ಉಪಲೋಕಾಯುಕ್ತ ಕೆ.ಎನ್. ಫಣೀಂದ್ರ ಅವರು ಜೂನ್ 13 ರಂದು ಹುಬ್ಬಳ್ಳಿಯಿಂದ ರಾತ್ರಿ 8.30 ಗಂಟೆಗೆ ಗದುಗಿಗೆ ಆಗಮಿಸಿ ವಾಸ್ತವ್ಯ ಮಾಡುವರು. ಜೂನ್ 14 ರಂದು ಬೆಳಿಗ್ಗೆ 10ಗಂಟೆಯಿಂದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಹಾಗೂ ಮನವಿಗಳನ್ನು ಸ್ವೀಕರಿಸುವರು.

ಸಂಜೆ 5.30 ರಿಂದ ಸಂಜೆ 6.30 ಗಂಟೆಯವರೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕುರಿತು ವಿವಿಧ ಇಲಾಖೆಗಳೊಂದಿಗೆ ಆಯೋಜಿಸಲಾದ ಕಾನೂನು ಸಾಕ್ಷರತಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗದಗದಲ್ಲಿ ವಾಸ್ತವ್ಯ ಮಾಡುವರು.

ಜೂನ್ 15 ರಂದು ಬೆಳಿಗ್ಗೆ 9.45 ರಿಂದ 10.45 ಗಂಟೆಯವರೆಗೆ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿನ ಗದಗ ಬಾರ್ ಅಸೋಸಿಯೇಷನ್ ಹಾಲ್‌ನಲ್ಲಿ ಸಾರ್ವಜನಿಕ ಆಡಳಿತದಲ್ಲಿ ವಕೀಲರ ಪಾತ್ರ ಕುರಿತು ಬಾರ್ ಅಸೋಸಿಯೇಷನ್ ಸದಸ್ಯರೊಂದಿಗೆ ಸಂವಾದ ನಡೆಸುವರು. ಬೆಳಿಗ್ಗೆ 11ರಿಂದ 11.30 ರವರೆಗೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ಸಾರ್ವಜನಿಕರ ಕುಂದುಕೊರತೆಗಳ ಹಾಗೂ ಬಾಕಿ ಉಳಿದ ಪ್ರಕರಣಗಳ ಕುರಿತು ಸಭೆ ನಡೆಸುವರು. ಬೆಳಿಗ್ಗೆ 11.30 ರಿಂದ ಬಾಕಿ ಉಳಿದ ಪ್ರಕರಣಗಳ ಕುರಿತು ಸಭೆ ಜರುಗಿಸಿ ಗದಗನಲ್ಲಿ ವಾಸ್ತವ್ಯ ಮಾಡುವರು.

ಜೂನ್ 16ರಂದು ಬೆಳಿಗ್ಗೆ 10 ರಿಂದ 11ರವರೆಗೆ ಜಿಲ್ಲಾ ನ್ಯಾಯಾಲಯದ ಸಂಕೀರ್ಣದಲ್ಲಿ ನ್ಯಾಯಾಲಯದ ಅಧಿಕಾರಿಗಳೊಂದಿಗೆ ಸಾರ್ವಜನಿಕ ಆಡಳಿತದಲ್ಲಿ ಲೋಕಾಯುಕ್ತ ಸಂಸ್ಥೆಯ ಹಾಗೂ ಕಾನೂನು ಸೇವಾ ಪ್ರಾಧಿಕಾರದ ಪಾತ್ರ ವಿಷಯಗಳ ಕುರಿತು ಸಭೆ ಹಾಗೂ ಸಂವಾದ ನಡೆಸುವರು. ನಂತರ 11.15 ರಿಂದ 12.30 ರವರೆಗೆ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಮಧ್ಯಾಹ್ನ 3 ಗಂಟೆಯಿಂದ ವಿವಿಧ ಇಲಾಖೆಗಳಿಗೆ ಅನಿರೀಕ್ಷಿತ ಭೇಟಿ ನೀಡುವರು. ಸಂಜೆ 7.30 ಗಂಟೆಗೆ ಗದಗನಿಂದ ಬೆಂಗಳೂರಿಗೆ ಪ್ರಯಾಣ ಮಾಡುವರು ಎಂದು ಲೋಕಾಯುಕ್ತ ಕಚೇರಿಯ ರೆಜಿಸ್ಟ್ರಾರ್ ಉಷಾರಾಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗದಗ ಜಿಲ್ಲಾ ಮಾದಕ ದ್ರವ್ಯ ನಿಯಂತ್ರಣ ಸಮಿತಿ ಸಭೆಯಲ್ಲಿ ಎಸ್‌ಪಿ ಬಿ.ಎಸ್. ನೇಮಗೌಡ ಕರೆ

# ಮಾದಕ ದ್ರವ್ಯ ಮುಕ್ತ ಜಿಲ್ಲೆಯಾಗಿಸಲು ಶ್ರಮಿಸೋಣ





■ವಿಜಯಸಾಕ್ಷಿ ಸುದ್ದಿ, ಗದಗ

ಮಾದಕ ದ್ರವ್ಯಗಳ ಸೇವನೆ ಯುವಜನತೆಯ ಆರೋಗ್ಯದ ಮೇಲೆ ಗಂಭೀರ ದುಷ್ಪರಿಣಾಮ ಬೀರಲಿದೆ. ಜಿಲ್ಲೆಯಲ್ಲಿ ಮಾದಕ ದ್ರವ್ಯಗಳ ಮಾರಾಟ ಹಾಗೂ ಸಾಗಾಣಿಕೆ ಮಾಡುವವರ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ಈ ದಿಸೆಯಲ್ಲಿ ಇಲಾಖೆಯ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ್ದದ ಗದಗ ಜಿಲ್ಲಾ ಮಾದಕ ದ್ರವ್ಯ ನಿಯಂತ್ರಣ ಸಮಿತಿ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಶಾಲಾ-ಕಾಲೇಜುಗಳ ಹತ್ತಿರವಿರುವ ಗೂಡಂಗಡಿಗಳಲ್ಲಿ ಮಾದಕ ದ್ರವ್ಯಗಳ ಮಾರಾಟವಾಗುವ ಸಂಭವ ಅಧಿಕವಾಗಿರುತ್ತವೆ. ಪೊಲೀಸ್ ಇಲಾಖೆ ಸೇರಿದಂತೆ ಸಂಬಂಧಿಸಿದ ವಿವಿಧ ಇಲಾಖೆ ಅಧಿಕಾರಿಗಳು ಅಂತಹ ಸ್ಥಳಗಳ ಮೇಲೆ ಹಾಗೂ ಅನುಮಾನಾಸ್ಪದ ವ್ಯಕ್ತಿಗಳ ಮೇಲೆ ನಿರಂತರವಾಗಿ ನಿಗಾ ವಹಿಸಬೇಕು ಎಂದರು.

ಮಾದಕ ದ್ರವ್ಯಗಳ ವ್ಯಸನದಿಂದ ಹಲವಾರು ದುಷ್ಪರಿಣಾಮಗಳು ಆಗಿರುವ ಬಗ್ಗೆ ಈಗಾಗಲೇ ಅನೇಕ ಉದಾಹರಣೆಗಳನ್ನು ಸಮಾಜದಲ್ಲಿ ನೋಡಬಹುದಾಗಿದೆ. ವ್ಯಸನದಿಂದಾಗಿ ಅನೇಕ ಕುಟುಂಬಗಳು ಬೀದಿಗೆ ಬಂದಿವೆ. ಇದೊಂದು ಸಾಮಾಜಿಕ ಪಿಡುಗಾಗಿದ್ದು, ಸಂಪೂರ್ಣ ನಿಯಂತ್ರಣಕ್ಕೆ ಸಾರ್ವಜನಿಕರ ಸಹಕಾರವೂ ಅತ್ಯಗತ್ಯವಾಗಿದೆ. ಮಾದಕ ದ್ರವ್ಯಗಳನ್ನು ಸೇವಿಸುವವರು ಹಾಗೂ ಮಾರಾಟ/ಸಾಗಾಟ ಮಾಡುವವರ ಮಾಹಿತಿ ದೊರೆತಲ್ಲಿ ತಕ್ಷಣವೇ ಹತ್ತಿರದ ಪೊಲೀಸ್ ಠಾಣೆಗೆ ಅಥವಾ ಪೊಲೀಸ್ ಸಹಾಯವಾಣಿ ಸಂಖ್ಯೆ-112 ಕರೆ ಮಾಡಿ ಮಾಹಿತಿ ಒದಗಿಸಬೇಕು ಎಂದು ಕೋರಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಹೆಚ್ಚಾಗಿ ಯುವಜನರೇ ಮಾದಕ ವ್ಯಸನಿಗಳಾಗಿದ್ದು, ಇದರಿಂದ ಅನೇಕ ದುಷ್ಪರಿಣಾಮ ಬೀರಲಿದೆ. ಇದರ ಸಂಪೂರ್ಣ ನಿಯಂತ್ರಣಕ್ಕೆ ಅಧಿಕಾರಿ ವರ್ಗ ಮುಂದಾಗಬೇಕು. ಜಿಲ್ಲೆಯ ಮೆಡಿಕಲ್ ಹಾಗೂ ಇಂಜನೀಯರಿಂಗ್ ಕಾಲೇಜು ಮತ್ತು ವಸತಿ ನಿಲಯಗಳ ಮೇಲೆ ನಿಗಾವಹಿಸಬೇಕು. ಶಾಲಾ-ಕಾಲೇಜುಗಳ ಹತ್ತಿರ ಹಾಗೂ ಹಾಸ್ಟೆಲ್‌ಗಳಲ್ಲಿ ಅಧಿಕಾರಿ ವರ್ಗ ನಿರಂತರವಾಗಿ ತಪಾಸಣೆ ನಡೆಸಬೇಕು. ಮಾದಕ ದ್ರವ್ಯಗಳು ಕಂಡುಬಂದಲ್ಲಿ ತಕ್ಷಣ ಅದರ ಮೂಲ ಪತ್ತೆ ಹಚ್ಚಿ ಅಪರಾಧ ಎಸಗುವವರ ಮೇಲೆ ನಿರ್ದಾಕ್ಷಿಣ್ಯ ಕಾನೂನು ಕ್ರಮಗಳನ್ನು ಕೈಗೊಳ್ಳುವ ಮೂಲಕ ಜಿಲ್ಲೆಯನ್ನು ಮಾದಕ ದ್ರವ್ಯ ಮುಕ್ತ ಜಿಲ್ಲೆಯಾಗಿಸಲು ಅಧಿಕಾರಿಗಳು ಪಣ ತೊಡಬೇಕು ಎಂದರು.

ಮದ್ಯ, ತಂಬಾಕು, ಗಾಂಜಾ, ಕೋಕೇನ್, ಓಪಿಯಮ್, ಅಂಪಿಟಮೈನ್, ಹೆರಾಯಿನ್, ನಿದ್ರೆ ಮಾತ್ರೆಗಳು, ಅನಿಲಗಳು (ವೈಟನರ್ ಪೆಟ್ರೋಲಿಯಂ ಉತ್ಪನ್ನಗಳು) ಮುಂತಾದವುಗಳು ಮಾದಕ ವಸ್ತುಗಳಾಗಿವೆ. ಇವುಗಳ ಚಟವು ವ್ಯಕ್ತಿಯ ಮೆದುಳಿನ ಮೇಲೆ ದೀರ್ಘಕಾಲದ ಮತ್ತು ಪ್ರಭಾವೀ ಪರಿಣಾಮ ಬೀರುತ್ತವೆ. ಮಾದಕ ವಸ್ತುಗಳನ್ನು ದುರುಪಯೋಗಪಡಿಸಿಕೊಳ್ಳುವ ವ್ಯಕ್ತಿಗಳು ತಮ್ಮ ಜವಾಬ್ದಾರಿಗಳನ್ನು ನಿರ್ಲಕ್ಷಿಸುತ್ತಾರೆ. ಶಾಲಾ ವಿದ್ಯಾರ್ಥಿಗಳು ತರಗತಿಗಳಿಗೆ ಗೈರು ಹಾಜರಾಗುವುದು, ಕೆಲಸವನ್ನು ಅರ್ಧಕ್ಕೆ ಬಿಡುವುದು ಸೇರಿದಂತೆ ಇತರ ಕಾರಣಗಳ ಮೂಲಕ ಗುರುತಿಸಬಹುದು. ಮಾದಕ ದ್ರವ್ಯಗಳಿಗೆ ಬಲಿಯಾದವರನ್ನು ಇಲಾಖಾಧಿಕಾರಿಗಳು ಗುರುತಿಸಬೇಕು. ಅವರ ಚಲನವಲನಗಳ ಮೂಲಕ ಅವರನ್ನು ಗಮನಿಸಿ, ಮಾದಕ ದ್ರವ್ಯಗಳ ಸರಬರಾಜನ್ನು ಬುಡಸಮೇತ ಕಿತ್ತೆಸೆಯಲು ಅಧಿಕಾರಿಗಳು ಶ್ರಮಿಸುವಂತೆ ಸೂಚಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ರವಿ ಗುಂಜೀಕರ್, ಜಿಮ್ಸ್ ಮಾನಸಿಕ ವಿಭಾಗದ ಮುಖ್ಯಸ್ಥ ಡಾ. ಸೋಮಶೇಖರ ಬಿಜ್ಜಳ ಸೇರಿದಂತೆ ಪೊಲೀಸ್, ಅಬಕಾರಿ, ಅರಣ್ಯ, ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

'ಜಗತ್ತಿನಲ್ಲಿ ಹೇಳುವುದೆಲ್ಲವನ್ನೂ ಈಗಾಗಲೇ ಹೇಳಿಯಾಗಿದೆ. ಈಗೇನಿದ್ದರೂ ಮಾಡುವುದೊಂದೇ ಬಾಕಿ' ಎಂದು ಸಿದ್ದೇಶ್ವರ ಶ್ರೀಗಳು ತಿಳಿಸಿದಂತೆ ನಾವೆಲ್ಲರೂ ಮಾದಕದ್ರವ್ಯ ನಿಯಂತ್ರಣಕ್ಕೆ ಸಂಪೂರ್ಣವಾಗಿ ಕಾರ್ಯನಿರ್ವಹಿಸೋಣ. ಜಿಲ್ಲೆಯಲ್ಲಿ ಮಾದಕ ದ್ರವ್ಯಗಳ ಸಂಪೂರ್ಣ ನಿಯಂತ್ರಣ ಮಾಡುವ ಮೂಲಕ ಮಾದಕ ದ್ರವ್ಯ ಮುಕ್ತ ಜಿಲ್ಲೆಯಾಗಿಸುವಲ್ಲಿ ಶ್ರಮಿಸೋಣ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಕರೆ ನೀಡಿದರು.

ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಅರಣ್ಯ ಇಲಾಖೆ, ಅಬಕಾರಿ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ದೈನಂದಿನ ಕರ್ತವ್ಯದೊಂದಿಗೆ ಮಾದಕ ದ್ರವ್ಯಗಳ ನಿಯಂತ್ರಣ ಕಾರ್ಯದಲ್ಲಿಯೂ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕೆಂದು ಸೂಚಿಸಿದರು. ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಅಧಿಕಾರಿಗಳು ಹೆಚ್ಚು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸುವ ಮೂಲಕ ಜಿಲ್ಲೆಯಲ್ಲಿ ಮಾದಕ ದ್ರವ್ಯಗಳ ನಿಯಂತ್ರಣಕ್ಕೆ ಕೈ ಜೋಡಿಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ತಿಳಿಸಿದರು.

### ಜಿಲ್ಲಾಧಿಕಾರಿಗಳಿಂದ ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆ

# ಯೋಜನೆಗಳ ಅನುಷ್ಠಾನದಲ್ಲಿ ವಿಳಂಬ ಸಲ್ಲದು



■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಎಲ್ಲ ಇಲಾಖೆಗಳ ಮಾತೃ ಇಲಾಖೆ ಕಂದಾಯ ಇಲಾಖೆಯಾಗಿದೆ. ಕಂದಾಯ ಇಲಾಖೆಯ ಯೋಜನೆಗಳು ಜನಸಾಮಾನ್ಯರಿಗೆ ಸಮಾಜದಲ್ಲಿ ಸಮಬಾಳು ಕಲ್ಪಿಸುವಲ್ಲಿ ಪೂರಕವಾಗಿವೆ. ಇಂತಹ ಕಂದಾಯ ಇಲಾಖೆಯ ಯೋಜನೆಗಳ ಅನುಷ್ಠಾನದಲ್ಲಿ ಅಧಿಕಾರಿಗಳ ವಿಳಂಬ ನೀತಿ ಸಹಿಸಲಾಗದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಎಚ್ಚರಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲೆಯ ಎಲ್ಲ ಕಂದಾಯ ಇಲಾಖೆಗಳ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾರ್ವಜನಿಕರಿಗೆ ಕಂದಾಯ ಇಲಾಖೆಯ ಮೇಲಿರುವ ವಿಶ್ವಾಸವು ನಿರಂತರವಾಗಿ ಉಳಿಸಿಕೊಳ್ಳುವ ಕೆಲಸವನ್ನು ಇಲಾಖೆಯ ಎಲ್ಲ ಹಂತದ ಅಧಿಕಾರಿಗಳು ನಿರ್ವಹಿಸಬೇಕು. ಇಲಾಖೆಯ ಕಾರ್ಯವ್ಯಾಪ್ತಿ ಅಪರಿಮಿತವಾಗಿದ್ದು, ಅಧಿಕಾರಿ/ಸಿಬ್ಬಂದಿಗಳು ಕಾಲಕಾಲಕ್ಕೆ ಸರ್ಕಾರ ನೀಡುವ ಮಾರ್ಗಸೂಚಿಗಳಂತೆ ಕರ್ತವ್ಯ ಪಾಲನೆ ಮಾಡಬೇಕು. ತಪ್ಪಿದಲ್ಲಿ ಕಾನೂನು ಕ್ರಮ ಎದುರಿಸಬೇಕಾಗುತ್ತದೆ ಎಂದು ಹೇಳಿದರು.

ಪರಿಹಾರ ಪ್ರಗತಿ, ತಾಲೂಕಾ ಕಚೇರಿಗಳ ಕಟ್ಟಡ ಪ್ರಸ್ತಾವನೆ, ಮೃಗಾಲಯ ಭೂಸ್ವಾಧೀನ, ಆಧಾರ್ ಸೀಡಿಂಗ್, ದಾಖಲಾತಿಗಳ ನಿರ್ವಹಣೆ, ಭೂಮಿ, ತಹಸೀಲ್ದಾರ ನ್ಯಾಯಾಲಯ ಪ್ರಕರಣಗಳು, ಆರ್.ಟಿ.ಸಿ. ಮಿಸ್ ಮ್ಯಾಚ್ ಪ್ರಕರಣಗಳು, ಮೋಜಣಿ, ಕೃಷಿ ಭೂಮಿ ಪರಿವರ್ತನೆ, ಐ.ಪಿ.ಜಿ.ಆರ್.ಎಸ್, ಮುಖ್ಯಮಂತ್ರಿಗಳ ಜನತಾ ದರ್ಶನ, ಸಕಾಲ, ಇ-ಆಫೀಸ್ ಸೇರಿದಂತೆ ವಿವಿಧ ಮಾಸಾಶನಗಳ ಪ್ರಗತಿ ಪರಿಶೀಲನೆಯನ್ನು ನಡೆಸಿದ ಜಿಲ್ಲಾಧಿಕಾರಿಗಳು ಎಲ್ಲ ಯೋಜನೆಗಳಲ್ಲಿ ಉತ್ತಮ ಪ್ರಗತಿ ಸಾಧಿಸಬೇಕು ಹಾಗೂ ತಹಸೀಲ್ದಾರರು ಕಾಲಕಾಲಕ್ಕೆ ತಮ್ಮ ಹಂತದಲ್ಲಿ ಸಭೆ ಏರ್ಪಡಿಸಿ ಪ್ರಗತಿ ಕುರಿತು ಪರಿಶೀಲನೆ ಕೈಗೊಳ್ಳುವಂತೆ ಸೂಚಿಸಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ, ಉಪವಿಭಾಗಾಧಿಕಾರಿ ಡಾ. ವೆಂಕಟೇಶ ನಾಯ್ಕ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಸೇರಿದಂತೆ ಆಯಾ ತಾಲೂಕಿನ ತಹಸೀಲ್ದಾರರು, ಭೂ ದಾಖಲೆಗಳ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

ತಾಲೂಕಾ ಹಂತದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಋತುಮಾನಕ್ಕೆ ತಕ್ಕಂತೆ ಬರ ನಿರ್ವಹಣೆ, ಅತಿವೃಷ್ಟಿ ನಿರ್ವಹಣೆ ಸೇರಿದಂತೆ ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಕಾರ್ಯ ನಿರ್ವಹಿಸಬೇಕು. ಸಮಾಜದ ಕೆಳಸ್ತರದ ವ್ಯಕ್ತಿಗೂ ಯೋಜನೆಗಳ ಸೌಲಭ್ಯ ತಲುಪಿಸುವ ಹೊಣೆಗಾರಿಕೆ ನಮ್ಮದಾಗಿದೆ. ಸಾಮಾಜಿಕ ನ್ಯಾಯದ ತಳಹದಿಯ ಮೇಲೆ ಇಲಾಖೆ ಎಲ್ಲ ಅಧಿಕಾರಿಗಳು ಕರ್ತವ್ಯನಿಷ್ಠೆಯಿಂದ ಕಾರ್ಯನಿರ್ವಹಿಸುವುದನ್ನು ರೂಢಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

### ಬಿತ್ತನೆ ಹಂಗಾಮಿನಲ್ಲಿ ತಾಲೂಕಿನಲ್ಲಿ ಡಿಎಪಿ ಗೊಬ್ಬರ ಕೊರತೆ । ಮುಂಗಾರಿನ ಬಿತ್ತನೆಗೆ ಪೆಟ್ಟು । ಶಾಸಕ ಡಾ. ಚಂದ್ರು ಲಮಾಣಿ ಅಸಮಾಧಾನ


# ದುಡ್ಡು ಕೊಟ್ಟರೂ ಸಿಗದ ರಸಗೊಬ್ಬರ : ತಪ್ಪದ ಗೋಳು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೃಷಿ ಇಲಾಖೆ ಮಂತ್ರಿಗಳು, ಶಾಸಕರು, ಹಿರಿಯ ಅಧಿಕಾರಿಗಳು ಸೇರಿ ಮುಂಗಾರಿನಲ್ಲಿ ರೈತರಿಗೆ ಬಿತ್ತನೆಗೆ ಬೀಜ, ಗೊಬ್ಬರದ ಕೊರತೆಯಿಲ್ಲ ಎಂಬ ಹೇಳಿಕೆಯ ಮೂಲಕ ಪ್ರಚಾರ ಗಿಟ್ಟಿಸಿಕೊಳ್ಳುತ್ತಿದ್ದರೂ ವಾಸ್ತವದಲ್ಲಿ ರೈತರಿಗೆ ಮುಖ್ಯವಾಗಿ ಬೇಕಾದ ಡಿಎಪಿ, ಕಾಂಪ್ಲೆಕ್ಸ್ ರಸಗೊಬ್ಬರದ ಕೊರತೆ ಕಾಡುತ್ತಿದೆ.

ಕಳೆದ ವರ್ಷದ ಬರಗಾಲದಿಂದ ರೈತರು ಆರ್ಥಿಕ ಸಂಕಷ್ಟದಲ್ಲಿದ್ದರೂ ಮುಂಗಾರು ಪೂರ್ವ ಮಳೆಯಿಂದ ಹೊಸ ಭರವಸೆ, ಕನಸುಗಳೊಂದಿಗೆ ಸಾಲ-ಸೋಲ ಮಾಡಿ ಬಿತ್ತನೆಗೆ ಸಜ್ಜಾಗಿದ್ದಾರೆ. ಆದರೆ ರೈತರಿಗೆ ಬಿತ್ತನೆ ಬೀಜದ ದರ ಹೆಚ್ಚಳದೊಂದಿಗೆ ದುಡ್ಡು ಕೊಟ್ಟರೂ ಅವಶ್ಯಕ ರಸಗೊಬ್ಬರ ಸಿಗದೇ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಅಲ್ಲದೇ ಡಿಎಪಿ ಮತ್ತು ಅವಶ್ಯಕ ಕಾಂಪ್ಲೆಕ್ಸ್ ಗೊಬ್ಬರ ಸಿಗದೇ ಮುಂಗಾರಿನ ಬಿತ್ತನೆಗೆ ಪೆಟ್ಟು ಬಿದ್ದಂತಾಗಿದೆ.



ಮುಂಗಾರು ಪೂರ್ವ ಮಳೆಯಿಂದಾಗಿ ಬಹುತೇಕ ರೈತರು ಉತ್ಸಾಹದಿಂದ ಬಿತ್ತನೆ ಕಾರ್ಯಕ್ಕೆ ಮುಂದಾಗಿದ್ದಾರೆ. ಕಳೆದ 10-15 ದಿನಗಳಿಂದ ಲಕ್ಷ್ಮೇಶ್ವರ ತಾಲೂಕಿನಲ್ಲಿ ರೈತರು ಡಿಎಪಿ ಗೊಬ್ಬರಕ್ಕಾಗಿ ಅಲೆದಾಡುತ್ತಿದ್ದರೂ ಡಿಎಪಿ ಗೊಬ್ಬರ ಸಿಗದಿರುವುದು ರೈತರನ್ನು ಚಿಂತೆಗೀಡು ಮಾಡಿದೆ. ಮುಂಗಾರಿನ ಪ್ರತಿಯೊಂದು ಬೆಳೆಗಳ ಬಿತ್ತನೆ ವೇಳೆ ಡಿಎಪಿ ರಸಗೊಬ್ಬರ ಬಳಸುವುದು ಸಾಮಾನ್ಯ. 18% ಯೂರಿಯಾ, 46% ಪಾಸ್ಪರಸ್ ಪೋಷಕಾಂಶವಿರುವ ಡಿಎಪಿ ಎಲ್ಲ ಬೆಳೆಗೆ ಉತ್ತಮ ಎಂಬ ನಂಬಿಕೆ ರೈತರದ್ದು.

ಲಕ್ಷ್ಮೇಶ್ವರ, ಶಿರಹಟ್ಟಿ ತಾಲೂಕುಗಳ ರಸಗೊಬ್ಬರ ಅಂಗಡಿಗಳಲ್ಲಿ ಡಿಎಪಿ ಗೊಬ್ಬರದ ಜತೆಗೆ ಪ್ರಮುಖ ಕಾಂಪ್ಲೆಕ್ಸ್ ಗೊಬ್ಬರದ ದಾಸ್ತಾನು ಇಲ್ಲವಾಗಿದೆ. ರಾತ್ರೋರಾತ್ರಿ ಬರುವ 50-100 ಚೀಲಗಳು ಬೆಳಗಾಗುವಷ್ಟರಲ್ಲಿ ಮಾರಾಟವಾಗಿರುತ್ತದೆ. ಪಟ್ಟಣ ಸೇರಿ ಗ್ರಾಮೀಣ ಪ್ರದೇಶಗಳಿಂದ ನಿತ್ಯ ಡಿಎಪಿ ಗೊಬ್ಬರ ಕೇಳಿಕೊಂಡು ಬರುವ ರೈತರು ಬಂದ ದಾರಿಗೆ ಸುಂಕವಿಲ್ಲ ಎಂಬಂತೆ ಪೆಚ್ಚು ಮೋರೆ ಹಾಕಿಕೊಂಡು ವಾಪಸ್ ಹೋಗುತ್ತಿದ್ದಾರೆ.

ಬರಗಾಲದಿಂದ ರೈತರ ಕೈಯಲ್ಲಿ ದುಡ್ಡಿಲ್ಲದಿದ್ದರೂ ಈ ವರ್ಷವದರೂ ಉತ್ತಮ ಮಳೆಯಾಗಿ ನಮ್ಮ ಸಂಕಷ್ಟ ದೂರವಾಗುತ್ತದೆ ಎಂಬ ಬಲವಾದ ನಂಬಿಕೆಯೊಂದಿಗೆ ಮತ್ತೆ ಬಡ್ಡಿಸಾಲ ಮಾಡಿ ಬೀಜ-ಗೊಬ್ಬರ ಖರೀದಿಸಿ ಬಿತ್ತನೆಗೆ ಸಜ್ಜಾದ್ದಾರೆ. ಆದರೆ ಗುಣಮಟ್ಟದ ಬಿತ್ತನೆ ಬೀಜಗಳು ಸಿಗುತ್ತಿಲ್ಲ. ಸಿಕ್ಕರೂ ದರ ದುಪ್ಪಟ್ಟು ಮಾಡಿದ್ದಾರೆ. ಆದಾಗ್ಯೂ ಎಲ್ಲವನ್ನೂ ಸವಾಲಾಗಿ ಸ್ವೀಕರಿಸಲು ಸಿದ್ಧರಿರುವ ರೈತರಿಗೆ ಈಗ ಅವಶ್ಯಕ ಡಿಎಪಿ ಮತ್ತು ಇತರೇ ಕಾಂಪ್ಲೆಕ್ಸ್ ಗೊಬ್ಬರ ಸಿಗುತ್ತಿಲ್ಲ. ಈಗ ಡಿಎಪಿಗಾಗಿ ಕಾದು ಬಿತ್ತನೆಗೂ ತಡವಾಗಿದೆ. ಇನ್ನೊಂದು ವಾರ ಮಾತ್ರ ಬಿತ್ತನೆಗೆ ಸಕಾಲವಾಗಿದೆ. ಸಂಬಂಧಪಟ್ಟ ಜನಪ್ರತಿನಿಧಿಗಳು, ಅಧಿಕಾರಿಗಳು ಡಿಎಪಿ ಗೊಬ್ಬರದ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು.

**– ಶಿವಾನಂದ ಕಟಗಿ, ಬಾಪೂಗೌಡ ಪಾಟೀಲ.** ರೈತರು.

ಡಿಎಪಿ ರಸಗೊಬ್ಬರದ ಕೊರತೆಯಿರುವ ಬಗ್ಗೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ರೈತರ ಬೇಡಿಕೆಯಂತೆ ಡಿಎಪಿ ಗೊಬ್ಬರ ತರಿಸುವ ವ್ಯವಸ್ಥೆ ಮಾಡಲಾಗುತ್ತಿದೆ. ಇತರೇ ಕಾಂಪ್ಲೆಕ್ಸ್ ರಸಗೊಬ್ಬರ, ಬೀಜ ದಾಸ್ತಾನಿದ್ದು ರೈತರು ಡಿಎಪಿ ಗೊಬ್ಬರಕ್ಕಾಗಿ ಬಿತ್ತನೆ ತಡ ಮಾಡದೇ ಭೂಮಿಯಲ್ಲಿ ತೇವಾಂಶವಿದ್ದರೆ ಸಕಾಲಿಕ ಬಿತ್ತನೆ ಮಾಡಬೇಕು. ನಂತರದಲ್ಲಿ ದ್ರವರೂಪದ ಡಿಎಪಿ, ಯೂರಿಯಾ ಬಳಕೆ ಮಾಡಬಹುದಾಗಿದೆ.

– ರೇವಣಪ್ಪ ಮನಗೂಳಿ.
ಸಹಾಯಕ ಕೃಷಿ ನಿರ್ದೇಶಕರು.



ಕಳೆದ ವರ್ಷದ ಬರಗಾಲದಿಂದ ರೈತರು ಸಂಕಷ್ಟದಲ್ಲಿದ್ದಾರೆ. ಸಕಲ ಜೀವರಾಶಿಗಳಿಗೆ ಅನ್ನ ನೀಡುವ ರೈತರಿಗೆ ದುಡ್ಡು ಕೊಟ್ಟರೂ ಸಕಾಲಕ್ಕೆ ಗುಣಮಟ್ಟದ ಬೀಜ, ಅವಶ್ಯಕ ಗೊಬ್ಬರ ಸಿಗದಿರುವುದು ಮತ್ತು ಸಿಕ್ಕರೂ ಬೆಲೆ ದುಪ್ಪಟ್ಟಾಗಿರುವುದು ದುರ್ದೈವ. ಸರ್ಕಾರಿ ಶಾಲೆಗಳು ಸೋರುತ್ತಿದ್ದು, ಮೂಲ ಸೌಕರ್ಯ ಕಲ್ಪಿಸಲಾಗುತ್ತಿಲ್ಲ. ಗ್ರಾಮೀಣ ಪ್ರದೇಶಗಳ ರಸ್ತೆಗಳ ಸ್ಥಿತಿ ಅಯೋಮಯವಾಗಿದ್ದು, ಅನುದಾನ ಸಿಗುತ್ತಿಲ್ಲ. ರೈತರು ಉಚಿತವಾಗಿ ಗೊಬ್ಬರ ಕೇಳುತ್ತಿಲ್ಲ. ಸರ್ಕಾರ ರೈತರಿಗೆ ಡಿಎಪಿ ಗೊಬ್ಬರ, ರಿಯಾಯಿತಿ ದರದಲ್ಲಿ ಬೀಜ ಲಭಿಸುವಂತೆ ಮಾಡಬೇಕು. ರಾಜ್ಯ ಸರ್ಕಾರದಿಂದ ರೈತರಿಗೆ ಅನ್ಯಾವಾಗುತ್ತಿದ್ದು, ಮುಂದಿನ ದಿನಗಳಲ್ಲಿ ರೈತರೊಡಗೂಡಿ ಸರ್ಕಾರದ ವಿರುದ್ಧ ಬೀದಿಗಿಳಿಯಬೇಕಾಗುತ್ತದೆ.

– ಡಾ.ಚಂದ್ರು ಲಮಾಣಿ.
ಶಾಸಕರು.

## ಕಾಂಗ್ರೆಸ್ ಪ್ರಚಾರದಿಂದ ಇಂಡಿಯಾ ಬಣಕ್ಕೆ ನಿರ್ಣಾಯಕ ಜನಾದೇಶ: ಜೈರಾಮ್ ರಮೇಶ್



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ತನ್ನ ಸಕಾರಾತ್ಮಕ ಪ್ರಚಾರ, ನ್ಯಾಯ್ ಖಾತರಿಗಳು ಮತ್ತು ಸಂವಿಧಾನವನ್ನು ರಕ್ಷಿಸಲು ಆದ್ಯತೆ ನೀಡುವುದರಿಂದ ಜೂನ್ 4 ರಂದು ಇಂಡಿಯಾ ಬಣವು "ಸ್ಪಷ್ಟ ಮತ್ತು ನಿರ್ಣಾಯಕ" ಜನಾದೇಶವನ್ನು ಪಡೆಯಲಿದೆ ಎಂದು ಕಾಂಗ್ರೆಸ್ ಶುಕ್ರವಾರ ಹೇಳಿದೆ.

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ಪಕ್ಷದ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಮುಖ್ಯಸ್ಥ ಪವನ್ ಖೇರಾ ಮತ್ತು ಎಐಸಿಸಿ ಸಾಮಾಜಿಕ ಮಾಧ್ಯಮ ವಿಭಾಗದ ಮುಖ್ಯಸ್ಥೆ ಸುಪ್ರಿಯಾ ಶ್ರೀನಾಟೆ ಅವರು, "ಕಳೆದ 72 ದಿನಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ '72 ದಿನಗಳು, 272 ಪ್ರಶ್ನೆಗಳು, 0 ಜವಾಬ್' ಎಂಬ ಶೀರ್ಷಿಕೆಯ 272 ಪ್ರಶ್ನೆಗಳ ' ಭಾಗ್ ಮೋದಿ ಭಾಗ್' ಎಂಬ ಸಂಕಲನವನ್ನು ಬಿಡುಗಡೆ ಮಾಡಿದರು.

ಖೇರಾ ಮತ್ತು ಶ್ರೀನಾಟೆ ಅವರೊಂದಿಗೆ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ರಮೇಶ್, ಕಾಂಗ್ರೆಸ್‌ನ ಪ್ರಚಾರವು ಸಕಾರಾತ್ಮಕವಾಗಿದೆ ಮತ್ತು ರಾಹುಲ್ ಗಾಂಧಿ ನೇತೃತ್ವದ ಭಾರತ್ ಜೋಡೋ ನ್ಯಾಯ ಯಾತ್ರೆಯ ಫಲಿತಾಂಶವಾಗಿದೆ ಎಂದು ಹೇಳಿದರು.

ಈ ವರ್ಷದ ಜನವರಿ 23 ರಂದು ಗುವಾಹಟಿಯಲ್ಲಿ ರಾಹುಲ್ ಗಾಂಧಿ ಮೊದಲ ಬಾರಿಗೆ ಯುವ ನ್ಯಾಯ, ನಾರಿ ನ್ಯಾಯ, ಕಿಸಾನ್ ನ್ಯಾಯ, ಶ್ರಮಿಕ್ ನ್ಯಾಯ್ ಮತ್ತು ಹಿಸ್ಸೆದಾರಿ ನ್ಯಾಯ್ ಎಂಬ ಐದು ನ್ಯಾಯಗಳನ್ನು ಘೋಷಿಸಿದರು ಎಂದು ಅವರು ನೆನಪಿಸಿಕೊಂಡರು.

ಫೆಬ್ರವರಿ 5 ರಂದು ರಾಂಚಿಯಲ್ಲಿ ಗಾಂಧಿ ಅವರು ಹಿಸ್ಸೆದಾರಿ ನ್ಯಾಯ ಮತ್ತು ಅದರ ಅಡಿಯಲ್ಲಿ ಪಕ್ಷದ ಖಾತರಿಗಳ ಬಗ್ಗೆ ಮಾತನಾಡಿದರು ಎಂದು ರಮೇಶ್ ಹೇಳಿದರು.

ಫೆಬ್ರವರಿ 23 ರಂದು ಅಂಬಿಕಾಪುರದಲ್ಲಿ, ಗಾಂಧಿ ಮತ್ತು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು 'ಕಿಸಾನ್ ನ್ಯಾಯ' ಅಡಿಯಲ್ಲಿ ಖಾತರಿಗಳನ್ನು ಘೋಷಿಸಿದರು. ಅವರು ಮಾರ್ಚ್ 7 ರಂದು ಬನ್ಸ್ವಾರಾದಲ್ಲಿ ಖರ್ಗೆ ಮತ್ತು ರಾಹುಲ್ ಗಾಂಧಿ ಅವರು 'ಯುವ ನ್ಯಾಯ' ಖಾತರಿಗಳನ್ನು ಬಿಡುಗಡೆ ಮಾಡಿದರು ಎಂದರು.

## ಸಾವಿನ ಅಂಚಿನಲ್ಲಿರುವ ವ್ಯಕ್ತಿಯ ಹೇಳಿಕೆ ಹೆಚ್ಚು ಮಾನ್ಯತೆಯನ್ನು ಹೊಂದಿದೆ: ಸುಪ್ರೀಂಕೋರ್ಟ್



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸಾವಿನ ಅಂಚಿನಲ್ಲಿರುವ ವ್ಯಕ್ತಿಗಳು ಅಪರೂಪಕ್ಕೆ ಸುಳ್ಳು ಹೇಳುತ್ತಾರೆ ಮತ್ತು ಅವರ ಕೊನೆಯ ಮಾತುಗಳು ಕಾನೂನಿನ ದೃಷ್ಟಿಯಲ್ಲಿ ಹೆಚ್ಚು ಸ್ವೀಕಾರಾರ್ಹತೆಯನ್ನು ಮತ್ತು ಅಪಾರವಾದ ಮಾನ್ಯತೆಯನ್ನು ಹೊಂದಿದೆ ಎಂದು ಸುಪ್ರೀಂಕೋರ್ಟ್ ತನ್ನ ತೀರ್ಪಿನಲ್ಲಿ ಹೇಳಿದೆ.

ನ್ಯಾಯಮೂರ್ತಿಗಳಾದ ಎ.ಎಸ್. ಓಕಾ ಮತ್ತು ಉಜ್ಜಲ್ ಭುಯಾನ್ ಅವರ ಪೀಠ ಮಹಾರಾಷ್ಟ್ರದಲ್ಲಿ ಓರ್ವ ಅಪರಾಧಿಗೆ ಪತ್ನಿಯ ಹತ್ಯೆಗೆ ಸಂಬಂಧಿಸಿ ಜೀವಾವಧಿ ಶಿಕ್ಷೆಯನ್ನು ವಿಧಿಸುವಾಗ, ಸಾಯುತ್ತಿರುವ ವ್ಯಕ್ತಿಯ ಕೊನೆಯ ಮಾತುಗಳು ಪ್ರಾಮಾಣಿಕವಾಗಿರುತ್ತವೆ ಎಂದು ಕಾನೂನು ನಂಬುತ್ತದೆ ಎಂದು ಹೇಳಿದ್ದಾರೆ.

ಪೊಲೀಸ್ ಪೇದೆಯಾಗಿದ್ದ ಪತ್ನಿಯನ್ನು ಭಾರತೀಯ ಸೇನೆಯಲ್ಲಿ ಕೆಲಸ ಮಾಡುತ್ತಿದ್ದ ವ್ಯಕ್ತಿಯೋರ್ವ 2002ರಲ್ಲಿ ಅಂಬಾಜೋಗಿಯಲ್ಲಿ ಸಹೋದರನ ಜೊತೆ ಸೇರಿ ಕಟ್ಟಿಹಾಕಿ ಮತ್ತು ಬೆಂಕಿ ಹಚ್ಚಿ ಬರ್ಬರವಾಗಿ ಕೊಲೆ ಮಾಡಿದ್ದ. ಆಕೆ ಸುಟ್ಟ ಗಾಯಗಳಿಂದ ಸಾಯುವ ಮೊದಲು ಆಕೆ ನೀಡಿದ ಹೇಳಿಕೆಯನ್ನು ಸುಪ್ರೀಂಕೋರ್ಟ್ ವಿಚಾರಣೆ ವೇಳೆ ಮಹತ್ವದ್ದಾಗಿ ಪರಿಗಣಿಸಿತ್ತು. ಸಾಯುತ್ತಿರುವ ವೇಳೆ ನೀಡುವ ಹೇಳಿಕೆಗೆ ಸ್ವೀಕಾರಾರ್ಹತೆ ಹೆಚ್ಚಾಗಿರುತ್ತದೆ. ಏಕೆಂದರೆ ಸಾವಿನ ಅಂಚಿನಲ್ಲಿರುವಾಗ, ಸುಳ್ಳು ಹೇಳುವ ಪ್ರಸಂಗವು ಅಪರೂಪವಾಗಿ ಮಾತ್ರ ಕಂಡುಬರುತ್ತದೆ ಎಂದು ನ್ಯಾಯಮೂರ್ತಿ ಭುಯಾನ್ ತನ್ನ ತೀರ್ಪಿನಲ್ಲಿ ಹೇಳಿದ್ದಾರೆ.

ನ್ಯಾಯಾಲಯವು ವ್ಯಕ್ತಿಯ ಅಂತಿಮ ಹೇಳಿಕೆಯನ್ನು ಅತ್ಯಂತ ಜಾಗರೂಕತೆಯಿಂದ ಪರಿಶೀಲಿಸಬೇಕು. ಸಾಯುವ ಸಮಯದಲ್ಲಿ ನೀಡಿದ ಹೇಳಿಕೆಯನ್ನು ಪುರಾವೆಯ ತುಣುಕಾಗಿ ಅಥವಾ ಒಂದು ಸ್ವತಂತ್ರ ಸಾಕ್ಷಿಯಾಗಿ ಪರಿಗಣಿಸಬಹುದೆಂದು ಎಂದು ನ್ಯಾಯಾಲಯ ಹೇಳಿದೆ. ಸಾವಿನ ಸಮಯದಲ್ಲಿ ವ್ಯಕ್ತಿಯು ನೀಡುವ ಹೇಳಿಕೆಯು ದೃಢೀಕರಿಸಲ್ಪಡದೆ ಇದ್ದಲ್ಲಿ ಅದನ್ನು ಪುರಾವೆಯಾಗಿ ಪರಿಗಣಿಸಲಾಗದು ಎಂಬುದಕ್ಕೆ ಯಾವುದೇ ಕಾನೂನಿಲ್ಲವೆಂದು ಹೇಳಿದ್ದಾರೆ.

## ಜೂನ್ 2 ರಂದು ಜೈಲಿಗೆ ಶರಣಾಗತಿ: 'ಗಂಭೀರ ಕಾಯಿಲೆಯ ಲಕ್ಷಣಗಳಿವೆ' ಎಂದ ಅರವಿಂದ್ ಕೇಜ್ರಿವಾಲ್



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ರದ್ದಾಗಿರುವ ಅಬಕಾರಿ ನೀತಿಗೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜೂನ್ 2 ರಂದು (ಭಾನುವಾರ) ತಿಹಾರ್ ಜೈಲಿನಲ್ಲಿ ಪೊಲೀಸರ ಮುಂದೆ ಶರಣಾಗುವುದಾಗಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಶುಕ್ರವಾರ ಹೇಳಿದ್ದಾರೆ. ಮೇ 10 ರಿಂದ ಮಧ್ಯಂತರ ಜಾಮೀನಿನ ಮೇಲೆ ಹೊರಗಿರುವ ಕೇಜ್ರಿವಾಲ್, ಅವರ ದೇಹವು "ಗಂಭೀರ ಕಾಯಿಲೆ"ಯ ಕೆಲವು ಲಕ್ಷಣಗಳನ್ನು ಹೊಂದಿರಬಹುದು ಎಂದು ವೈದ್ಯರು ಹೇಳಿದ್ದಾರೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕೇಜ್ರಿವಾಲ್, 'ನನ್ನನ್ನು ಎಷ್ಟು ದಿನ ಜೈಲಿನಲ್ಲಿ ಇರಿಸಲಾಗುತ್ತದೆ ಎಂದು ನನಗೆ ತಿಳಿದಿಲ್ಲ. ದೇಶವನ್ನು ಸರ್ವಾಧಿಕಾರದಿಂದ ಪಾರುಮಾಡಲು ಮತ್ತೆ ಜೈಲಿಗೆ ಹೋಗುತ್ತೇನೆ. ಎಂದ ನನ್ನ ಆತ್ಮಶಕ್ತಿ ಹೆಚ್ಚಿದೆ' ಎಂದರು.

ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ಕೇಜ್ರಿವಾಲ್, "ಅವರು ನನ್ನನ್ನು ಮುರಿಯಲು ಹಲವು ರೀತಿಯಲ್ಲಿ ಪ್ರಯತ್ನಿಸಿದರು, ನನ್ನ ಬಾಯಿ ಮುಚ್ಚಿಸಲು ಪ್ರಯತ್ನಿಸಿದರು. ಆದರೆ, ಅವರು ಯಶಸ್ವಿಯಾಗಲಿಲ್ಲ, ನಾನು ಜೈಲಿನಲ್ಲಿದ್ದಾಗ ಅವರು ನನಗೆ ಹಲವು ರೀತಿಯಲ್ಲಿ ಚಿತ್ರಹಿಂಸೆ ನೀಡಿದರು. ನನ್ನ ಔಷಧಿಗಳನ್ನು ನಿಲ್ಲಿಸಿದರು; ನಾನು ಏನೂ ಮಾಡಲಿಲ್ಲ. ಈ ಜನರಿಗೆ (ಬಿಜೆಪಿ) ಏನು ಬೇಕು ಎಂದು ತಿಳಿದಿಲ್ಲ, ಅವರು ಇದನ್ನು ಏಕೆ ಮಾಡಿದರು" ಎಂದು ಪ್ರಶ್ನಿಸಿದರು.

"ಜೈಲಿಗೆ ಹೋದಾಗ ನನ್ನ ತೂಕ 70 ಕೆ.ಜಿ. ಇವತ್ತು 64 ಕೆ.ಜಿ., ಜೈಲಿನಿಂದ ಬಿಡುಗಡೆಯಾದ ಮೇಲೂ ತೂಕ ಹೆಚ್ಚುತ್ತಿಲ್ಲ, ಇದು ದೇಹದಲ್ಲಿ ಯಾವುದೋ ಗಂಭೀರ ಕಾಯಿಲೆಯ ಲಕ್ಷಣವೂ ಆಗಿರಬಹುದು ಎಂದು ವೈದ್ಯರು ಹೇಳುತ್ತಿದ್ದಾರೆ. ಅನೇಕ ಪರೀಕ್ಷೆಗಳನ್ನು ಮಾಡಬೇಕಾಗಿದೆ" ಎಂದು ಅವರು ಹೇಳಿದರು.

### 'ಶಿವಾನುಭವ' ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ ಡಾ. ತೋಂಟದ ಸಿದ್ಧರಾಮ ಶ್ರೀಗಳ ನುಡಿ

# ತಾಯಿ ಸ್ಥಾನವನ್ನು ಯಾರೂ ತುಂಬಲಾರರು



■ವಿಜಯಸಾಕ್ಷಿ ಸುದ್ದಿ, ಗದಗ

ತಾಯಿಗಿಂತ ದೊಡ್ಡವರು ಯಾರೂ ಇಲ್ಲ. ತಾಯಿಯಿಂದ ಸಂಸ್ಕಾರ ಮತ್ತು ಪಾಠ ಕಲಿತವರೇ ಧನ್ಯರು. ಹುಟ್ಟಿದ ಶಿಶುವಿಗೆ ತಾಯಿಯೇ ಮೊದಲ ಗುರು ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2695ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಉಪ್ಪಿಗಿಂತ ರುಚಿಯಿಲ್ಲ–ತಾಯಿಗಿಂತ ಬಂಧುವಿಲ್ಲ ಎಂಬ ಮಾತನ್ನು ಉಲ್ಲೇಖಿಸಿ, ಉಪ್ಪಿನ ರುಚಿಯನ್ನು ಯಾವ ವಸ್ತುವೂ ಕೊಡಲು ಸಾಧ್ಯವಿಲ್ಲ. ಅದೇ ರೀತಿ ತಾಯಿಯ ಸ್ಥಾನವನ್ನು ಯಾರೂ ತುಂಬಲು ಸಾಧ್ಯವಿಲ್ಲ. ತಾಯಿಯ ಸ್ಥಾನ ಬಹಳ ಮಹತ್ವದ್ದಾಗಿದೆ. ಅಂತಃಕರಣ, ವಾತ್ಸಲ್ಯ, ಪ್ರೀತಿ, ದಯೆ ತಾಯಿಯಲ್ಲಿರುವ ವಿಶೇಷ ಗುಣಗಳು. ಪ್ರಾಚೀನ ಕಾಲದಿಂದಲೂ ತಂದೆ–ತಾಯಿಗಳನ್ನು ಗೌರವಿಸುವ ಸಂಸ್ಕೃತಿ ನಮ್ಮದು. ಮಕ್ಕಳೂ ಸಹಿತ ತಂದೆ–ತಾಯಿಗಳನ್ನು ವೃದ್ಧಾಶ್ರಮಕ್ಕೆ ತಳ್ಳದೇ ಪಾಲನೆ–ಪೋಷಣೆ, ಸಂರಕ್ಷಣೆ ಮಾಡಬೇಕು. ಹೆಣ್ಣು ಮಕ್ಕಳಿಗಾಗಿಯೇ ಸರಕಾರದ ಇಲಾಖೆ ಮತ್ತು ಸಬಲೀಕರಣಕ್ಕಾಗಿ ವಿಶೇಷ ಯೋಜನೆಗಳು ಜಾರಿಯಲ್ಲಿವೆ. ಸಮಾಜದಲ್ಲಿ ಹೆಣ್ಣುಮಕ್ಕಳು ಬೆಳೆಯಲು ಸಾಕಷ್ಟು ಅವಕಾಶಗಳಿದ್ದು, ಉಪಯೋಗ ಮಾಡಿಕೊಳ್ಳಬೇಕು ಎಂದು ಶ್ರೀಗಳು ತಿಳಿಸಿದರು.

ಶರಣೆ ಗಿರಿಜಕ್ಕ ಧರ್ಮರೆಡ್ಡಿ ಅವರು ಲಿಂಗೈಕ್ಯ ಡಾ. ಅಕ್ಕ ಅನ್ನಪೂರ್ಣ ತಾಯಿ ಬೀದರ ಅವರಿಗೆ ನುಡಿನಮನ ಸಲ್ಲಿಸಿದರು. ವಿಶ್ವ ತಾಯಂದಿರ ದಿನಾಚರಣೆ ಅಂಗವಾಗಿ ರತ್ನವ್ವ ಚನ್ನವೀರಪ್ಪ ಕ್ಯಾಡದ, ಮಹಾದೇವಿ ಈಶ್ವರಪ್ಪ ಅರಳಿ, ಜ್ಯೋತಿ ಅಶೋಕ ಅಗಸನಕೊಪ್ಪ ಅವರನ್ನು ಪೂಜ್ಯರು ಸಂಮಾನಿಸಿದರು.

ಗುರುನಾಥ ಸುತಾರ, ಅಶೋಕ ಸುತಾರ, ಕುಮಾರಸ್ವಾಮಿ ಹಿರೇಮಠ ತಂಡದವರು ವಚನ ಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ಅರಮಾನ ಎಂ.ನಾಗನೂರ, ವಚನ ಚಿಂತನೆಯನ್ನು ಸಾಕೀಬ್ ಎನ್.ನಾಗನೂರ ಮಾಡಿದರು. ಶಿವಾನುಭವದ ದಾಸೋಹ ಭಕ್ತಿ ಸೇವೆಯನ್ನು ವಹಿಸಿಕೊಂಡಿದ್ದ ಮಲ್ಲಪ್ಪ ದ್ಯಾಮಪ್ಪ ಕಾಬಳ್ಳಿ, ಪ್ರಭು ಮೆಡಿಕಲ್ಸ್ ಗದಗ ಅವರನ್ನು ಪೂಜ್ಯರು ಸಂಮಾನಿಸಿದರು.

ಸರ್ವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ.ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್‌ರಾದ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

'ಅವ್ವನ ಮಮತೆ' ವಿಷಯ ಕುರಿತು ಸೌಖ್ಯದಾ ಆಸ್ಪತ್ರೆಯ ಸ್ತ್ರೀರೋಗ ತಜ್ಞೆ ಡಾ. ತೇಜಸ್ವಿನಿ ಹಿರೇಮಠ ಉಪನ್ಯಾಸ ನೀಡಿ, ತ್ಯಾಯಿಯ ತ್ಯಾಗ ದೊಡ್ಡದು. ತಾಯಿಯ ಋಣ ತೀರಿಸಲು ಸಾಧ್ಯವಿಲ್ಲ. ಹೆಣ್ಣಿಗೆ ಮುಟ್ಟಿನ ಸಮಸ್ಯೆ, ರಕ್ತಹೀನತೆ, ಮಾನಸಿಕ ದೌರ್ಬಲ್ಯಗಳಂತಹ ಅನೇಕ ಸಮಸ್ಯೆಗಳು ಕಾಡುತ್ತಿರುತ್ತವೆ. ಈ ಸಮಯದಲ್ಲಿ ಪರಿವಾರದವರ ಸಹಾಯ, ಸಹಕಾರ, ಕಾಳಜಿ ಬಹಳ ಅವಶ್ಯ. ಸರಿಯಾದ ಸಮಯಕ್ಕೆ ಸೂಕ್ತ ಚಿಕಿತ್ಸೆ ಕೊಡಿಸಬೇಕು. ಸಮಾಜದಲ್ಲಿ ಹೆಣ್ಣು ಅಂದರೆ ನಿರ್ಲಕ್ಷ್ಯ ಭಾವ ಇದೆ. ಆ ಭಾವ ತೊರೆದು ಪ್ರತೀ ಹಂತದಲ್ಲೂ ಸ್ಪಂದನೆ, ಪ್ರೋತ್ಸಾಹ ಲಭಿಸಬೇಕು ಎಂದು ಅಭಿಪ್ರಾಯಪಟ್ಟರು.

# ವಾಲ್ಮೀಕಿ ನಿಗಮದಲ್ಲಿ ಅಕ್ರಮ: ಸಚಿವರನ್ನು ವಜಾ ಮಾಡಿ



■ವಿಜಯಸಾಕ್ಷಿ ಸುದ್ದಿ, ಗದಗ

ವಾಲ್ಮೀಕಿ ನಿಗಮದಲ್ಲಿ 187ಕೋಟಿ ರೂ. ಹಗರಣವನ್ನು ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಲಘುವಾಗಿ ಪರಿಗಣಿಸಿದೆ. ಡೆತ್ ನೋಟ್ ನಲ್ಲಿ ಸಚಿವರ ಹೆಸರಿದ್ದರೂ ಇದೂವರೆಗೂ ಅವರ ವಿರುದ್ಧ ಕ್ರಮಕ್ಕೆ ಮುಂದಾಗಿಲ್ಲ. ಕೂಡಲೇ ಆ ಸಚಿವರನ್ನು ಸಂಪುಟದಿಂದ ವಜಾಗೊಳಿಸಿ ಕಾನೂನಿನ ಪ್ರಕಾರ ಶಿಕ್ಷೆ ನೀಡಬೇಕು ಎಂದು ರಾಜ್ಯ ಜೆಡಿಎಸ್ ವಕ್ತಾರ ವ್ಹಿ ಆರ್ ಗೋವಿಂದಗೌಡ್ರ ಆಗ್ರಹಿಸದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬೀಜ–ರಸಗೊಬ್ಬರದ ದರ ಏರಿಕೆ ಆಗಿದೆ. ಬೀಜದ ದರವನ್ನು ಶೇ. 40% ಏರಿಸಲಾಗಿದೆ. ಪಕ್ಕದ ರಾಜ್ಯದಲ್ಲಿ ನಮಗಿಂತ ಬೀಜಗಳು ತುಟ್ಟಿ ಇವೆ ಎಂದು ಹೇಳುವ ಮೂಲಕ ಮುಖ್ಯಮಂತ್ರಿಗಳು ಉಡಾಫೆ ಮಾತುಗಳನ್ನಾಡುತ್ತಾರೆ. ಬೀಜ–ರಸಗೊಬ್ಬರ ಅಂಗಡಿಯ ಮಾಲಕರು ರೈತರ ಜೊತೆ ಚೆಲ್ಲಾಟ ಆಡುತ್ತಿದ್ದಾರೆ. ಇದು ಸಂಪೂರ್ಣವಾಗಿ ನಿಲ್ಲಬೇಕು ಎಂದರು.

ಗುಜರಾತ್‌ನಲ್ಲಿ ಅಗ್ನಿ ಅವಘಡದಿಂದ 34ಜನ ಸಜೀವ ದಹನ ಆಗಿದ್ದಾರೆ. ಅದಕ್ಕೆ ಯಾರು ಹೊಣೆ ಎಂದು ಜಿ. ಪರಮೇಶ್ವರ ಕೇಳ್ತಾರೆ. ಅದು ಆಕಸ್ಮಿಕವಾಗಿ ನಡೆದ ಘಟನೆ. ಅಷ್ಟು ಸಾಮಾನ್ಯ ಜ್ಞಾನ ಅವರಿಗಿಲ್ಲ. ಅದರ ಬಗ್ಗೆ ಈಗಾಗಲೇ ಕ್ರಮ ಕೈಗೊಂಡು ಸಂಬಂಧಪಟ್ಟವರನ್ನು ಬಂಧನ ಮಾಡಲಾಗಿದೆ. ಆದರೆ, ಕರ್ನಾಟಕದಲ್ಲಿ ಕೊಲೆ ನಡೆಯುತ್ತಿವೆ ಅದರ ಬಗ್ಗೆ ಯಾಕೆ ಮಾತನಾಡುತ್ತಿಲ್ಲ ಎಂದು ಜಿ. ಪರಮೇಶ್ವರ ವಿರುದ್ದ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಜೆಡಿಎಸ್ ಉಪಾಧ್ಯಕ್ಷ ಗಿರೀಶ್ ಸಂಶಿ, ಬಸವರಾಜ ಅಪ್ಪಣ್ಣವರ, ಕೆ. ಎಫ್. ದೊಡ್ಮನಿ ಉಪಸ್ಥಿತರಿದ್ದರು.

**ಡಿ. ಆರ್ ಪಾಟೀಲರು ಜೆಡಿಎಸ್ ಗೆ ಬರಲಿ..**

ಮಾಜಿ ಶಾಸಕ ಡಿ. ಆರ್ ಪಾಟೀಲರನ್ನು ಕೇವಲ ಬಾಯಿ ಮಾತಲ್ಲಿ ಮುತ್ಸದ್ದಿ ರಾಜಕಾರಣಿ, ಸಂತ ರಾಜಕಾರಣಿ ಎಂದು ಹೇಳಿದರೇ ಸಾಲದು, ಅವರಿಗೆ ಸೂಕ್ತ ಸ್ಥಾನ–ಮಾನ ಕಾಂಗ್ರೆಸ್ ಪಕ್ಷ ನೀಡಬೇಕಿತ್ತು. ಆದರೆ, ಈ ಬಗ್ಗೆ ಜಿಲ್ಲಾಧ್ಯಕ್ಷರು ಮಾತನಾಡುತ್ತಿಲ್ಲ, ಸಚಿವರು ಸ್ಪಂಧಿಸುತ್ತಿಲ್ಲ. ಹೀಗಾಗಿ ಡಿ. ಆರ್ ಪಾಟೀಲರು ಜೆಡಿಎಸ್ ಪಕ್ಷಕ್ಕೆ ಬಂದ್ರೆ ಸ್ವಾಗತ. ಅವರಿಗೆ ಸೂಕ್ತ–ಸ್ಥಾನಮಾನ ಪಕ್ಷ ನೀಡುತ್ತದೆ.

– ವ್ಹಿ. ಆರ್ ಗೋವಿಂದಗೌಡ್ರ
ಜೆಡಿಎಸ್ ರಾಜ್ಯ ವಕ್ತಾರ

# ತೋಂಟದಾರ್ಯ ಶಾಲೆಯಲ್ಲಿ ಪ್ರಾರಂಭೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಗದ್ಗುರು ತೋಂಟದಾರ್ಯ ಶಿಕ್ಷಣ ಸಂಸ್ಥೆಯ ತೋಂಟದಾರ್ಯ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ 2024ರ ಶಾಲಾ ಪ್ರಾರಂಭೋತ್ಸವ ಜರುಗಿತು. ಸರಸ್ವತಿ ಹಾಗೂ ಪೂಜ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಶಾಲೆಗೆ ಆಗಮಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ಶಿಕ್ಷಕರು ಪುಷ್ಪಾರ್ಪಣೆ ಮಾಡಿ, ವಿಭೂತಿ ಹಚ್ಚಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ ಮಕ್ಕಳಿಗೆ ಸಿಹಿ ವಿತರಿಸಿದರು. ಎನ್.ವ್ಹಿ. ಗಾಳಿ, ಸುರೇಖಾ ಕುಂಬಾರಗೇರಿಮಠ, ಮಧುಮತಿ ಬಂಡಿವಾಡ, ಕೆ.ಎಂ. ಗೌಡರ, ವಂದನಾ ಮಿಸಾಳ, ಸಂಸ್ಕೃತ ಶಿಕ್ಷಕಿ ವಿಜಯಲಕ್ಷ್ಮೀ ಪಟ್ಟಣಶೆಟ್ಟಿ ಸೇರಿದಂತೆ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಎಲ್ಲ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ರೈತರಿಗೆ ಬಿತ್ತನೆ ಬೀಜ, ಗೊಬ್ಬರದ ಗ್ಯಾರಂಟಿ ಇಲ್ಲ: ಬಸವರಾಜ ಬೊಮ್ಮಾಯಿ

# ರಾಜ್ಯ ಸರ್ಕಾರ ಮುಂಗಾರು ಸಿದ್ಧತೆಯಲ್ಲಿ ವಿಫಲವಾಗಿದೆ



■ವಿಜಯಸಾಕ್ಷಿ ಸುದ್ದಿ, ಹಾವೇರಿ

ಉತ್ತರ ಕರ್ನಾಟಕದಲ್ಲಿ ರೈತರು ಬಿತ್ತನೆ ಪ್ರಾರಂಭ ಮಾಡಿದ್ದಾರೆ. ಬಿತ್ತನೆ ಬೀಜ, ಗೊಬ್ಬರದ ಕೊರತೆ ಆಗಿದೆ. ಬೀಜದ ದರ ಹೆಚ್ಚಾಗಿದೆ, ಮಳೆ ಬಿದ್ದರೂ ರೈತರು ಬಿತ್ತನೆ ಮಾಡಲು ಸಾಧ್ಯವಾಗಿಲ್ಲ. ರಾಜ್ಯ ಸರ್ಕಾರ ಮುಂಗಾರು ಸಿದ್ದತೆಯಲ್ಲಿ ವಿಫಲವಾಗಿದೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಹಾವೇರಿಯಲ್ಲಿ ಪತ್ರಿಕಾಗೋಷ್ಠಿ ಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಬರಗಾಲ ಇದ್ದರೂ ಕೃಷಿ ಇಲಾಖೆಯ ಫಾರ್ಮ್ ಗಳು, ಕೃಷಿ ಹಾಗೂ ತೋಟಗಾರಿಕೆ ವಿವಿಗಳ ಮೂಲಕ ಬೀಜೋತ್ಪಾದನೆಗೆ ಕ್ರಮ ಕೈಗೊಳ್ಳಬೇಕಿತ್ತು. ಉತ್ಪಾದನೆ ಮಾಡದಿದ್ದರೂ ಅಗತ್ಯ ಬಿತ್ತನೆ ಬೀಜಗಳನ್ನು ಆಮದು ಮಾಡಿಕೊಳ್ಳಬಹುದಿತ್ತು, ಆ ಕೆಲಸವನ್ನೂ ಸರ್ಕಾರ ಮಾಡಿಲ್ಲ. ಹೀಗಾಗಿ ಬಿತ್ತನೆ ಬೀಜದ ದರ ಹೆಚ್ಚಾಗಿದೆ. ದರ ಹೆಚ್ಚಾಗಿದೆ ಎಂದು ರೈತರು ಬಿತ್ತನೆ ಮಾಡುವುದನ್ನು ನಿಲ್ಲಿಸಲು ಸಾಧ್ಯವಿಲ್ಲ. ಇದರಿಂದ ಆಹಾರ ಉತ್ಪಾದನೆ ಕುಂಠಿತವಾಗುತ್ತದೆ. ಇವರು ಅನ್ನಭಾಗ್ಯ ಅಂತ ಹೇಳುತ್ತಾರೆ. ಅನ್ನಕ್ಕೆ ಮೊದಲು ಬೇಕಾಗಿರುವುದು ಬಿತ್ತನೆ ಬೀಜ ಎಂದು ಹೇಳಿದರು.

ನಾವು ರೈತರಿಗೆ ಬಿತ್ತನೆ ಬೀಜ ಖರೀದಿಸಲು ಭೂಸಿರಿ ಅಂತ ಯೋಜನೆ ಮೂಲಕ ಹತ್ತು ಸಾವಿರ ರೂಪಾಯಿ ಕೊಡುತ್ತಿದ್ದೇವು. ಈ ಸರ್ಕಾರ ಅದನ್ನು ನಿಲ್ಲಿಸಿದೆ. ಈ ಸರ್ಕಾರ ರೈತರಿಗೆ ಏನು ಗ್ಯಾರಂಟಿ ಕೊಟ್ಟಿದೆ, ಬೀಜದ ಗ್ಯಾರಂಟಿ ಇಲ್ಲ. ಗೊಬ್ಬರದ ಗ್ಯಾರಂಟಿ ಇಲ್ಲ. ಬೆಳೆದ ಬೆಳೆಗೆ ಬೆಲೆ ಗ್ಯಾರಂಟಿ ಇಲ್ಲ. ಮಾರುಕಟ್ಟೆ ಗ್ಯಾರಂಟಿ ಇಲ್ಲ. ಹೀಗಾಗಿ ಸರ್ಕಾರ ರೈತರಿಗೆ ಪ್ರತಿ ಹೆಕ್ಟೇರ್ ಗೆ 25 ಸಾವಿರ ಪ್ರೋತ್ಸಾಹ ಧನ ಕೊಡಬೇಕು ಎಂದು ಆಗ್ರಹಿಸಿದರು.

**ಸಚಿವರ ತಲೆದಂಡವಾಗಲಿ**

ಇನ್ನು ವಾಲ್ಮೀಕಿ ನಿಗಮದ ಪ್ರಕರಣ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಯಾರ ಕಾಲದಲ್ಲಿ ಯಾರ ಡೈರೆಕ್ಷನ್ನಲ್ಲಿ ಅವ್ಯವಹಾರ ಆಗಿದೆ ಎನ್ನುವುದು ಮುಖ್ಯ. ಆತ್ಮಹತ್ಯೆ ಮಾಡಿಕೊಂಡ ಅಧಿಕಾರಿ ಡೆತ್ ನೋಟಲ್ಲಿ ಸಚಿವರ ಹೆಸರು ಹೇಳಿದ್ದಾನೆ. ಈ ಬಗ್ಗೆ ತನಿಖೆ ಆಗಲಿ, ಇದರಲ್ಲಿ ಸಚಿವರ ಪಾತ್ರ ಇಲ್ಲ ಅಂದರೆ ಮತ್ತೆ ಸಚಿವರಾಗಲಿ, ಮೊದಲು ಸಚಿವರ ತಲೆದಂಡವಾಗಬೇಕು ಎಂದು ಹೇಳಿದರು.

**ಡಿಎಪಿ ಅಗತ್ಯವಿದೆ**

ರೈತರಿಗೆ ಈಗ ಡಿಎಪಿ ಗೊಬ್ಬರದ ಅಭಾವವಿದೆ. ಬೇಕಾಗಿದ್ದನ್ನು ಬಿಟ್ಟು ಉಳಿದಿದ್ದೆಲ್ಲ ಇದೆ. ಈ ವರ್ಷ ಮಾರ್ಕೆಟಿಂಗ್ ಫೆಡರೇಷನ್‌ಗೆ ಒಂದು ನಯಾ ಪೈಸೆ ಕೊಟ್ಟಿಲ್ಲ. ಪ್ರತಿವರ್ಷ ಮಾರ್ಕೆಟಿಂಗ್ ಫೆಡರೇಷನ್‌ಗೆ 400 ರಿಂದ 500 ಕೋಟಿ ಕೊಡಲಾಗುತ್ತಿತ್ತು. ಸಿಎಂ ಸಿದ್ದರಾಮಯ್ಯ ಕೂಡಲೆ ಮಧ್ಯಪ್ರವೇಶ ಮಾಡಬೇಕು, ಫೆಡರೇಶನ್‌ಗೆ ಅನುದಾನ ಕೊಡಬೇಕು ಎಂದು ಆಗ್ರಹಿಸಿದರು.

## ಪ್ರಚೋದನಕಾರಿ ಪೋಸ್ಟ್ : ಹಿಂದುತ್ವ ಮುಖಂಡ ಶರಣ್ ಪಂಪ್‌ವೆಲ್ ವಿರುದ್ಧ ಪ್ರಕರಣ ದಾಖಲು



■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಮಂಗಳೂರಿನಲ್ಲಿ ರಸ್ತೆಯಲ್ಲಿ ನಮಾಝ್ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಕೋಮು ಸೌಹಾರ್ದತೆಗೆ ಧಕ್ಕೆ ತರುವ ಪ್ರಚೋದನಕಾರಿ ಪೋಸ್ಟ್ ಹಾಕಿದ ಹಿಂದುತ್ವ ಮುಖಂಡ ಶರಣ್ ಪಂಪ್‌ವೆಲ್ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಕಳೆದ ಶುಕ್ರವಾರ ನಗರದ ಕಂಕನಾಡಿಯಲ್ಲಿ ಮಸೀದಿ ಪಕ್ಕದ ಒಳ ರಸ್ತೆ ಬದಿಯಲ್ಲಿ ಕೆಲ ಯುವಕರು ನಮಾಝ್ ಮಾಡಿದ ವಿಡಿಯೋ ವೈರಲ್ ಆಗಿತ್ತು. ನಮಾಝ್ ನಿರ್ವಹಿಸಿದ್ದಕ್ಕೆ ಸಂಘಪರಿವಾರ ಆಕ್ಷೇಪ ವ್ಯಕ್ತಪಡಿಸಿತ್ತು. ಇದರ ಬೆನ್ನಲ್ಲೆ ಪೊಲೀಸರು ಸುಮೋಟೊ ಪ್ರಕರಣ (ಐಪಿಸಿ ಸೆಕ್ಷನ್ 341, 283, 143 ಜೊತೆಗೆ 149 ಸೆಕ್ಷನ್) ದಾಖಲಿಸಿಕೊಂಡಿದ್ದರು. ಪೊಲೀಸರ ಕ್ರಮಕ್ಕೆ ಮುಸ್ಲಿಂ ಸಮುದಾಯ ಆಕ್ರೋಶ ವ್ಯಕ್ತಪಡಿಸಿತ್ತು. ಸಾಮಾಜಿಕ ಮಾಧ್ಯಮಗಳಲ್ಲಿ ಕಾಂಗ್ರೆಸ್ ಸರ್ಕಾರ ಮತ್ತು ಪೊಲೀಸ್ ಇಲಾಖೆಯ ವಿರುದ್ಧ ವ್ಯಾಪಕ ಅಸಮಾಧಾನ ವ್ಯಕ್ತವಾಗಿತ್ತು.

ಮೇ 29ರಂದು ಕಾಂಗ್ರೆಸ್ ಮುಖಂಡ ಕೆ ಕೆ ಶಾಹುಲ್ ಹಮೀದ್ ನೇತೃತ್ವದ ಮುಸ್ಲಿಂ ನಾಯಕರ ನಿಯೋಗ ಮಂಗಳೂರು ನಗರ ಪೊಲೀಸ್ ಆಯುಕ್ತರನ್ನು ಭೇಟಿಯಾಗಿ ಕೇಸ್ ವಾಪಸ್ ಪಡೆಯುವಂತೆ ಆಗ್ರಹಿಸಿದ್ದರು. ಇಲ್ಲದಿದ್ದರೆ ಹೋರಾಟದ ಎಚ್ಚರಿಕೆ ನೀಡಿದ್ದರು. ಎಸ್‌ಡಿಪಿಐ ಪಕ್ಷ ಇಂದು (ಮೇ 31) ಶುಕ್ರವಾರ ಪ್ರತಿಭಟನೆ ಕೂಡ ಹಮ್ಮಿಕೊಂಡಿತ್ತು.

ಪೊಲೀಸರ ಕ್ರಮದ ವಿರುದ್ಧ ಆಕ್ರೋಶ ಹೆಚ್ಚಾಗುತ್ತಿದ್ದಂತೆ ಸುಮೋಟೊ ಪ್ರಕರಣ ರದ್ದಾಗಿದೆ. ಈ ಬಗ್ಗೆ ಅಧಿಕೃತ ಹೇಳಿಕೆ ಪ್ರಕಟಿಸಿರುವ ಮಂಗಳೂರು ನಗರ ಪೊಲೀಸ್ ಆಯುಕ್ತ ಅನುಪಮ್ ಅಗರ್ವಾಲ್ "ರಸ್ತೆಯಲ್ಲಿ ನಮಾಝ್ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂಚಾರಕ್ಕೆ ಅಡೆತಡೆ ಮಾಡುವ ಯಾವುದೇ ಉದ್ದೇಶ ಇಲ್ಲದಿರುವುದರಿಂದ ಸದ್ರಿ ಪ್ರಕರಣದಲ್ಲಿ 'ಬಿ' ಅಂತಿಮ ವರದಿ ಸಲ್ಲಿಸಲಾಗಿದೆ ಮತ್ತು ಹಿರಿಯ ಅಧಿಕಾರಿಗಳಿಗೆ ಯಾವುದೇ ಮಾಹಿತಿಯನ್ನು ನೀಡದೆ ಸುಮೋಟೊ ಪ್ರಕರಣ ದಾಖಲಿಸಿದ ಕದ್ರಿ ಪೊಲೀಸ್ ನಿರೀಕ್ಷಕರನ್ನು ಕಡ್ಡಾಯ ರಜೆಯಲ್ಲಿ ಕಳುಹಿಸಿ, ಎಸಿಪಿ ದರ್ಜೆಯ ಅಧಿಕಾರಿಯನ್ನು ವಿಚಾರಣೆಗೆ ನೇಮಕ ಮಾಡಲಾಗಿದೆ" ಎಂದು ತಿಳಿಸಿದ್ದಾರೆ.

## ಎನ್‌ಎಸ್‌ಯುಐ ರಾಷ್ಟ್ರೀಯ ಕಾರ್ಯದರ್ಶಿ ರಾಜ್ ಸಂಪತ್ ಕೊಲೆ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಎನ್‌ಎಸ್‌ಯುಐ ರಾಷ್ಟ್ರೀಯ ಕಾರ್ಯದರ್ಶಿ ರಾಜ್ ಸಂಪತ್ ಆಂಧ್ರಪ್ರದೇಶದ ಶ್ರೀ ಸತ್ಯಸಾಯಿ ಜಿಲ್ಲೆಯ ಧರ್ಮಾವರಂ ಹೊರವಲಯದ ನೀರಾವರಿ ಟ್ಯಾಂಕ್ ಬಳಿ ನಿಗೂಢವಾಗಿ ಶವವಾಗಿ ಪತ್ತೆಯಾಗಿದ್ದಾರೆ.

ವೃತ್ತಿಯಲ್ಲಿ ವಕೀಲರಾಗಿದ್ದ ಸಂಪತ್(36) ಲೋಕಸಭೆ ಚುನಾವಣೆಗೆ ಕೇರಳದಲ್ಲಿ ಎನ್‌ಎಸ್‌ಯುಐ ಉಸ್ತುವಾರಿಯನ್ನು ವಹಿಸಿದ್ದರು ಮತ್ತು ರಾಹುಲ್ ಗಾಂಧಿಯವರ ಐದು ತಿಂಗಳ ಭಾರತ್ ಜೋಡೋ ಯಾತ್ರೆಯಲ್ಲಿ ಸಕ್ರಿಯ ಪಾತ್ರ ವಹಿಸಿದ್ದರು.

ಬುಧವಾರ ರಾತ್ರಿ 8 ಗಂಟೆ ಸುಮಾರಿಗೆ ರಾಜ್ ಸಂಪತ್‌ಗೆ ಅವರ ಸ್ನೇಹಿತರು ಕೊನೆಯ ಬಾರಿ ನೋಡಿದ್ದರು. ಆ ಬಳಿಕ ಅವರು ನಾಪತ್ತೆಯಾಗಿದ್ದರು. ಸ್ಥಳೀಯರು ಮೃತದೇಹವೊಂದು ಪತ್ತೆಯಾಗಿರುವ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿದಾಗ ಪ್ರಕರಣ ಬಯಲಾಗಿದೆ. ಪ್ರಾಥಮಿಕ ತನಿಖೆಯಿಂದ ಸಂಪತ್‌ನನ್ನು ಬೇರೆಡೆ ಕೊಲೆ ಮಾಡಿ ಶವವನ್ನು ಪಟ್ಟಣದ ಹೊರವಲಯದ ತೊಟ್ಟಿಯ ಬಳಿ ಎಸೆದು ಹೋಗಿರಬಹುದು ಎಂದು ಶಂಕೆ ವ್ಯಕ್ತಪಡಿಸಲಾಗಿದೆ. ಪ್ರಕರಣದ ತನಿಖೆಯ ನೇತೃತ್ವ ವಹಿಸಿರುವ ಡಿಎಸ್ಪಿ ಶ್ರೀನಿವಾಸ ರಾವ್, ವಿಧಿವಿಜ್ಞಾನ ತಂಡದೊಂದಿಗೆ ಶವ ಪತ್ತೆಯಾದ ಸ್ಥಳದಲ್ಲಿ ಪರಿಶೀಲನೆ ನಡೆಸಿದ್ದಾರೆ.

ಸಂಪತ್‌ಗೆ ಸಹ ವಕೀಲರೊಬ್ಬರ ಜತೆ ಜಮೀನು ವಿವಾದವಿದ್ದು, ಈ ಕುರಿತು ಇತ್ತೀಚೆಗೆ ಹಿರಿಯ ಪೊಲೀಸ್ ಅಧಿಕಾರಿಗೆ ವಾಟ್ಸಾಪ್ ಸಂದೇಶ ಕಳುಹಿಸಿ ಜೀವಕ್ಕೆ ಅಪಾಯವಿದೆ ಎಂದು ಹೇಳಿದ್ದರು ಎಂದು ಸಂಪತ್ ಅವರ ಆಪ್ತ ಮೂಲಗಳು ತಿಳಿಸಿವೆ. ಈ ಕುರಿತು ಎಲ್ಲಾ ಕೋನಗಳಲ್ಲೂ ತನಿಖೆ ನಡೆಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಶಂಕಿತರನ್ನು ಹೆಸರಿಸಲು ಅಥವಾ ಕೊಲೆಯ ಹಿಂದಿನ ಸಂಭವನೀಯ ಉದ್ದೇಶದ ಬಗ್ಗೆ ಪ್ರಾಥಮಿಕವಾಗಿ ಮಾಹಿತಿ ನೀಡಲು ಪೊಲೀಸರು ನಿರಾಕರಿಸಿದ್ದಾರೆ.

### ಶಾಲಾ ಪ್ರಾರಂಭೋತ್ಸವದ ಸಾಂಕೇತಿಕ ಕಾರ್ಯಕ್ರಮದಲ್ಲಿ ಬಿಇಓ ಎಚ್.ಎನ್. ನಾಯಕ ಕರೆ

# ಮಕ್ಕಳನ್ನು ಪಠ್ಯ-ಪುಸ್ತಕಕ್ಕೆ ಸೀಮಿತಗೊಳಿಸದಿರಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳನ್ನು ಪಠ್ಯ-ಪುಸ್ತಕಕ್ಕೆ ಸೀಮಿತಗೊಳಿಸದೇ ಸಂತೋಷ, ಸಂಭ್ರಮ, ಆಸಕ್ತಿಯಿಂದ ಕಲಿಸುವ ಜೊತೆಗೆ ಮಕ್ಕಳಲ್ಲಿ ಮೌಲ್ಯಗಳನ್ನು ಬಿತ್ತುವ ಕೆಲಸವಾಗಬೇಕಿದೆ ಎಂದು ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ್ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಸರಕಾರಿ ಮಾದರಿ ಪ್ರಾಥಮಿಕ ಶಾಲೆ ನಂ.2 ಸ.ಮಾ.ಪ್ರಾ. ಹೆ.ಮ ಶಾಲೆ ಹಾಗೂ ತಾ.ಪಾ.ಮ.ಬ ಪ್ರಾಥಮಿಕ ಶಾಲೆ ಇವರ ಸಹಯೋಗದಲ್ಲಿ ಶುಕ್ರವಾರ 2024-25ರ ಶಾಲಾ ಪ್ರಾರಂಭೋತ್ಸವದ ತಾಲೂಕು ಮಟ್ಟದ ಸಾಂಕೇತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮೊದಲು ಇದ್ದ ಅವಿಭಕ್ತ ಕುಟಂಬ ವ್ಯವಸ್ಥೆ ಈಗಿಲ್ಲ. ಈ ಹಿನ್ನೆಲೆಯಲ್ಲಿ ಮಕ್ಕಳಿಗೆ ಅವಿಭಕ್ತ ಕುಟುಂಬದ ಪರಿಕಲ್ಪನೆಯ ಜೊತೆಗೆ ಇಳಿವಯಸ್ಸಿನಲ್ಲಿರುವ ತಂದೆ-ತಾಯಿಯರನ್ನು ಚೆನ್ನಾಗಿ ನೋಡಿಕೊಳ್ಳುವಂತೆ ನಮ್ಮ ಸಂಸ್ಕೃತಿ ಸಂಪ್ರದಾಯ, ಹಿರಿಯರಿಗೆ ಗೌರವ ನೀಡುವದು ಇತ್ಯಾದಿ ಮಾನವೀಯ ಮೌಲ್ಯಗಳನ್ನು ತಿಳಿಸುವ ಕಾರ್ಯವೂ ಆಗಬೇಕಾಗಿದೆ ಎಂದು ಹೇಳಿದರು.



ಉದ್ಘಾಟನಾ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಸಿಹಿ ತಿನ್ನಿಸಿ, ಹೂಗುಚ್ಛ ನೀಡಿ ಸ್ವಾಗತಿಸಲಾಯಿತು. ವೇದಿಕೆಯಲ್ಲಿದ್ದ ಶಿಕ್ಷಕರ ಹಾಗೂ ನೌಕರರ ಸಂಘಟನೆಗಳ ಪದಾಧಿಕಾರಿಗಳು ವಿದ್ಯಾರ್ಥಿಗಳಿಗೆ ಉಚಿತ ಪಠ್ಯ-ಪುಸ್ತಕ ಹಾಗೂ ಸಮವಸ್ತ್ರವನ್ನು ವಿತರಿಸಿದರು. ನೂತನವಾಗಿ ಅಧಿಕಾರ ವಹಿಸಿಕೊಂಡ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ವೇದಿಕೆಯಿಂದ ಸನ್ಮಾನಿಸಲಾಯಿತು.

ಶಾಲೆಯ ಮುಖ್ಯೋಪಾಧ್ಯಾಯೆ ಎಸ್.ಎಸ್. ಜಿರಂಕಳಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಬಿ.ಎಸ್. ಹರ್ಲಾಪುರ, ದೈಹಿಕ ಶಿಕ್ಷಣ ಪರಿವೀಕ್ಷಕ ಎಂ.ಎಂ. ಹವಳದ, ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಎಂ.ಬಿ. ಹೊಸಮನಿ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಎ.ಎನ್. ಮುಳಗುಂದ, ಚಂದ್ರು ನೇಕಾರ, ಇ.ಸಿ.ಓ ಉಮೇಶ ಹುಚ್ಚಯ್ಯನಮಠ, ಎಚ್.ಎಮ್. ಗುತ್ತಲ, ಎನ್.ಎನ್. ಸುಣಗಾರ, ಆರ್.ಎಂ. ಶಿರಹಟ್ಟಿ, ಡಿ.ಎನ್. ದೊಡ್ಡಮನಿ, ಪಿ.ಎಚ್. ಕೊಂಡಾಬಿಂಗಿ ಭಾಗವಹಿಸಿದ್ದರು.

ಶುಕ್ರವಾರ ಬೆಳಿಗ್ಗೆ 9.30ಕ್ಕೆ ದಾಖಲಾತಿ ಆಂದೋಲನದ ಭಾಗವಾಗಿ ಜಾಗೃತಿ ಮೂಡಿಸಲು ಪ್ರಭಾತಪೇರಿಯನ್ನು ಉದ್ಘಾಟಿಸಿದ ಡಿಡಿಪಿಐ ಕಾರ್ಯಾಲಯದ ಎ.ಪಿ.ಸಿ.ಓ ಎಸ್.ಕೆ. ಹವಾಲ್ದಾರ ಮಾತನಾಡಿ, 2024-25ರ ಶೈಕ್ಷಣಿಕ ವರ್ಷದಲ್ಲಿ ಡಿಡಿಪಿಐರವರು ಶೈಕ್ಷಣಿಕ ಬಲವರ್ಧನೆಗಾಗಿ ಐದು ಅಂಶಗಳ ಕಾರ್ಯಕ್ರಮವನ್ನು ಯೋಜಿಸಿದ್ದು, ಅದನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲಾಗುತ್ತಿದೆ ಎಂದರು. ನೌಕರರ ಸಂಘದ ತಾಲೂಕಾಧ್ಯಕ್ಷ ಡಿ.ಎಚ್. ಪಾಟೀಲ ಮತ್ತಿತರರಿದ್ದರು.

ಮುಖ್ಯೋಪಾಧ್ಯಾಯ ಬಿ.ಎಂ. ಕುಂಬಾರ ಸ್ವಾಗತಿಸಿದರು. ಪ್ರೌಢಶಾಲಾ ವಿಭಾಗದ ಬಿ.ಆರ್.ಪಿ ಈಶ್ವರ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕಿಯರಾದ ಸಿ.ಎಫ್. ಪಾಟೀಲ, ಕೆ.ಆರ್. ಮುದಕಣ್ಣವರ, ಪಿ.ಎಮ್. ಅಡ್ನೂರ ಪ್ರಾರ್ಥಿಸಿದರು. ಉತ್ತರ ವಲಯದ ಸಿ.ಆರ್.ಪಿ ಉಮೇಶ ನೇಕಾರ ನಿರೂಪಿಸಿದರು. ದಕ್ಷಿಣ ವಲಯದ ಸಿ.ಆರ್.ಪಿ ಸತೀಶ ಬೋಮಲೆ ವಂದಿಸಿದರು. ಮೂರು ಶಾಲೆಗಳ ಸಹ ಶಿಕ್ಷಕ-ಶಿಕ್ಷಕಿಯರು ಭಾಗವಹಿಸಿದ್ದರು. ಶಾಲೆಯ ಆರಂಭದ ಮೊದಲ ದಿನವೇ ಬಹಳಷ್ಟು ವಿದ್ಯಾರ್ಥಿಗಳು ಅತ್ಯಂತ ಸಂಭ್ರಮದಿಂದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದು ಕಂಡುಬಂದಿತು.



## ಅಡವಿಸೋಮಾಪೂರ ಸಣ್ಣ ತಾಂಡೆ ಶಾಲಾ ಪ್ರಾರಂಭೋತ್ಸವ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಅಡವಿಸೋಮಾಪೂರ ಸಣ್ಣ ತಾಂಡೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಒಂದನೇ ತರಗತಿಗೆ ಮಕ್ಕಳನ್ನು ಶಾಲೆಗೆ ದಾಖಲು ಮಾಡಿಕೊಂಡು ಅವರಿಗೆ ಹೂವು, ಸಿಹಿ ನೀಡಿ, ಇಲಾಖೆ ಉಚಿತವಾಗಿ ನೀಡಿದ ಪಠ್ಯ-ಪುಸ್ತಕ, ಎರಡು ಜೊತೆ ಸಮವಸ್ತ್ರ, ಲೇಖನ ಸಾಮಗ್ರಿ ವಿತರಿಸಿ ಶಾಲಾ ಪ್ರಾರಂಭೋತ್ಸವಕ್ಕೆ ಎಸ್‌ಡಿಎಂಸಿ ಅಧ್ಯಕ್ಷ ಮಾರುತಿ ಪವಾರ ಚಾಲನೆ ನೀಡಿದರು.

ಶಾಲೆಯ ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್. ಮಾತನಾಡಿ, ನಮ್ಮ ಶಾಲೆಯಲ್ಲಿ ಉಚಿತವಾಗಿ ಕ್ಷೀರಭಾಗ್ಯ, ರಾಗಿ ಮಾಲ್ಟ್, ಮಧ್ಯಾಹ್ನದ ಬಿಸಿಯೂಟ, ಪಠ್ಯ ಪುಸ್ತಕ, ಸಮವಸ್ತ್ರ, ಶೂ-ಸಾಕ್ಸ್ ನೀಡಿ, ಜೊತೆಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತೇವೆ. ತಮ್ಮ ಮಕ್ಕಳನ್ನು ತಪ್ಪದೇ ನಮ್ಮ ಶಾಲೆಗೆ ದಾಖಲು ಮಾಡಲು ಪಾಲಕರಿಗೆ ಕರೆ ನೀಡಿದರು.

ಶಿಕ್ಷಕರಾದ ಎಸ್.ಜಿ. ಅಮ್ಮಿನಭಾವಿ ಮಕ್ಕಳ ಶೈಕ್ಷಣಿಕ ಜೀವನಕ್ಕೆ ಶುಭ ಹಾರೈಸಿದರು. ಪಿ.ಬಿ. ಕಿಲಬನವರ, ಎಸ್.ಟಿ. ಹಳಕಟ್ಟಿ, ಗ್ರಾ.ಪಂ ಸದಸ್ಯ ವೆಂಕಟೇಶ್ ಲಮಾಣಿ, ಲಕ್ಷ್ಮಣ ಲಮಾಣಿ, ಸೋಮನಾಥ ಲಮಾಣಿ, ಥಾವರೆಪ್ಪ ಪವಾರ, ಕಳಕಪ್ಪ ಚವ್ಹಾಣ, ಬಿಸಿಯೂಟ ಸಿಬ್ಬಂದಿಗಳಾದ ಗಂಗವ್ವ ಲಮಾಣಿ, ಸವಿತಾ ಪವಾರ, ದೇವಲೆಪ್ಪ ಲಮಾಣಿ, ರೇವಪ್ಪ ಲಮಾಣಿ, ಉಮೇಶ ಲಮಾಣಿ, ಸೋಮನಾಥ ರಾಠೋಡ, ಸೀತವ್ವ ಲಮಾಣಿ, ಸಾವಿತ್ರಿ ರಾಠೋಡ, ದೇವಕ್ಕ ಲಮಾಣಿ, ಲಕ್ಷ್ಮೀ ಲಮಾಣಿ, ಮೀರವ್ವ ಪವಾರ, ಶಾಂತವ್ವ ರಾಠೋಡ, ರೇಣುಕಾ ಲಮಾಣಿ, ಗೀತಾ ರಾಠೋಡ ಮುಂತಾದವರಿದ್ದರು.

### ವಾ.ಕ.ರ.ಸಾ.ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಎಂ.ಪ್ರಿಯಾಂಗಾ ಸಾರಿಗೆ ವಿಭಾಗಕ್ಕೆ ಭೇಟಿ

## ಪ್ರಯಾಣಿಕರಿಗೆ, ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕಾರ್ಯನಿರ್ವಹಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಘಟಕ ಹಾಗೂ ವಿಭಾಗೀಯ ಕಾರ್ಯಾಗಾರಕ್ಕೆ ವಾ.ಕ.ರ.ಸಾ.ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಎಂ.ಪ್ರಿಯಾಂಗಾ ಗುರುವಾರದಂದು ಭೇಟಿ ನೀಡಿದರು.

ವಾಹನಗಳ ಸ್ಥಿತಿಗತಿಗಳನ್ನು ಪರಿಶೀಲಿಸಿದರು. ಶಕ್ತಿ ಯೋಜನೆಯಿಂದಾಗಿ ಹಾಗೂ ಶಾಲಾ-ಕಾಲೇಜುಗಳು ಪ್ರಾರಂಭವಾಗುತ್ತಿರುವದರಿಂದ ಬಸ್ಸಿನಲ್ಲಿ ಪ್ರಯಾಣಿಕರ ಜನದಟ್ಟಣೆ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಪ್ರಯಾಣಿಕರಿಗೆ ಹಾಗೂ ಶಾಲಾ ಮಕ್ಕಳಿಗೆ ತೊಂದರೆಯಾಗದಂತೆ ಸಮರ್ಪಕವಾಗಿ ಕಾರ್ಯಾಚರಣೆ ಮಾಡುವಂತೆ ಎಲ್ಲ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮಳೆಗಾಲ ಪ್ರಾರಂಭವಾಗುತ್ತಿರುವ ಹಿನ್ನಲೆಯಲ್ಲಿ ಯಾವುದೇ ವಾಹನ ಮೇಲ್ಚಾವಣಿ ಸೋರಿಕೆಯಾಗದಂತೆ, ಕಿಟಕಿಯ ಗ್ಲಾಸ್‌ಗಳನ್ನು, ವಾಹನಗಳ ವೈಪರ್, ಹೆಡ್‌ಲೈಟ್, ಪ್ರಯಾಣಿಕರ ಬಾಗಿಲುಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಲು ವಿಭಾಗದ ಅಧಿಕಾರಿಗಳಿಗೆ ಸೂಚಿಸಿದರು.

ಪ್ರಯಾಣಿಕರಿಗೆ ಹಾಗೂ ಶಾಲಾ ಮಕ್ಕಳಿಗೆ ವೇಳೆಗೆ ಸರಿಯಾಗಿ ವಾಹನಗಳನ್ನು ಕಾರ್ಯಾಚರಣೆ ಮಾಡಲು ಹಾಗೂ ಯಾವುದೇ ದೂರುಗಳು ಬಾರದಂತೆ ಕ್ರಮವಹಿಸಲು ಸೂಚಿಸಿದರು.

ಈ ಸಂದರ್ಭದಲ್ಲಿ ವಿಭಾಗೀಯ ನಿಯಂತ್ರಣಾಧಿಕಾರಿ ಡಿ.ಎಂ. ದೇವರಾಜ್, ಡಿಎಂಇ, ಡಿಟಿಓ ಹಾಗೂ ಗದಗ ವಿಭಾಗದ ಇನ್ನಿತರ ಅಧಿಕಾರಿಗಳು ಹಾಜರಿದ್ದರು.

## ಶಾಲಾ ಪ್ರಾರಂಭೋತ್ಸವ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಇಲ್ಲಿನ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರಲ್ಲಿ 2024/25ನೇ ಸಾಲಿನ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವ ಸಡಗರ ಸಂಭ್ರಮದಿಂದ ನೆರವೇರಿತು.



ಮಕ್ಕಳಿಗೆ ಗುಲಾಬಿ ಹೂವು, ಸಿಹಿ ಹಾಗೂ ಪೆನ್-ಪೆನ್ಸಿಲ್ ನೀಡಿ ಸ್ವಾಗತಿಸಿದ ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ ಮಾತನಾಡಿ, 2024/25ನೇ ಸಾಲಿನ ಶೈಕ್ಷಣಿಕ ವರ್ಷ ವರ್ಷದ ಗುಣಮಟ್ಟದ ಶಿಕ್ಷಣದ ಧ್ಯೇಯದೊಂದಿಗೆ ಪ್ರಾರಾಂಭವಾಗಿದ್ದು, ಸರಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ಪುಸ್ತಕ, 2 ಜೊತೆ ಸಮವಸ್ತ್ರ, ಕ್ಷೀರ ಭಾಗ್ಯ, ಶೂ&ಸಾಕ್ಸ್, ಉಚಿತ ಪ್ರವೇಶ, ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ. 5 ವರ್ಷ 6 ತಿಂಗಳ ತುಂಬಿರುವ ಮಗುವನ್ನು ಸರಕಾರಿ ಶಾಲೆಗೆ ದಾಖಲಾತಿ ಮಾಡಿ ಮಕ್ಕಳ ಉಜ್ವಜ ಭವಿಷ್ಯಕ್ಕೆ ಪಾಲಕರು ಸಹಕರಿಸಬೇಕು ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಸಿಆರ್‌ಪಿ ಎಂ.ಎಂ. ನಿಂಬನಾಯ್ಕರ್, ಶಿಕ್ಷಕರಾದ ಎಂ.ಎಂ. ಮೆಗಲಮನಿ, ಎಂ.ಎಂ. ಕೊಪ್ಪಳ, ಕೆ.ಎಂ. ಹೆರಕಲ್ಲ, ಎಚ್.ಆರ್. ಭಜಂತ್ರಿ, ಎಸ್.ಎಚ್. ಉಪ್ಪಾರ, ವಿ.ಎಂ. ಕಂಠಿ, ವಿ.ಎಸ್. ಹಿರೇಮಠ, ಟಿ.ವೀಣಾ, ಎಸ್.ಡಿ. ಪಂಡಿತ, ಜ್ಯೋತಿ ಜಾಧಾವ, ಎಸ್‌ಡಿಎಂಸಿ ಸದಸ್ಯರಾದ ಜಿ.ಎಂ. ಗಾಡಿ, ಮಂಜುನಾಥ ಗುಲಗಂಜಿ, ಶಿವಪ್ಪ ಮಡ್ಡಿ, ದಾವಲಬಿ ಗಾಡಿ, ಪೀರದೋಷ ಶಿದ್ದಿ, ಅಡುಗೆ ಸಿಬ್ಬಂದಿ ಸಂಕಮ್ಮಾ ಯಳವತ್ತಿ, ಮೇಹಬೂಬಿ ಹೊಸೂರ, ಲಕ್ಷ್ಮೀ ಬೇಂದ್ರೆ, ರೇಣುಕಾ ಕಬಾಡಿ ಇದ್ದರು.

## ಅಯ್ಯನಗೌಡರ ಸೇವೆ ಸ್ಮರಣೀಯ



■ ವಿಜಯಸಾಕ್ಷಿ ಸುದ್ದಿ, ಗದಗ

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದ ಮೇಲ್ವಿಚಾರಕರಾದ ಅಯ್ಯನಗೌಡರ ಅವರ ಸೇವಾ ನಿವೃತ್ತಿಯ ನಿಮಿತ್ತ ಗದಗ ಜಿಲ್ಲಾ ಆಟೋ ಚಾಲಕ-ಮಾಲಕರ ಸಂಘ, ಜೈಭೀಮ್ ಆಟೋ ಚಾಲಕ-ಮಾಲಕರ ಸಂಘದಿಂದ ಬೀಳ್ಕೊಡುಗೆ ಸಮಾರಂಭ ಏರ್ಪಡಿಸಲಾಗಿತ್ತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಂಘದ ಜಿಲ್ಲಾಧ್ಯಕ್ಷ ವಿಜಯ ಕಲ್ಮನಿ ಮಾತನಾಡಿ, ಅಯ್ಯನಗೌಡರು ಕೆಎಸ್‌ಆರ್‌ಟಿಸಿಯಲ್ಲಿ ಸೇವೆ ಸಲ್ಲಿಸುತ್ತಿದ್ದರೂ ಕೂಡ ಆಟೋ ಚಾಲಕರೊಂದಿಗೆ ಉತ್ತಮ ಒಡನಾಟವನ್ನು ಬೆಳೆಸಿಕೊಂಡಿದ್ದರು. ಅವರ ನಿವೃತ್ತ ಜೀವನವು ಸುಖಕರವಾಗಿರಲಿ ಎಂದು ಹಾರೈಸಿದರು.

ಸನ್ಮಾನ ಸ್ವೀಕರಿಸಿದ ಅಯ್ಯನಗೌಡರ ಮಾತನಾಡಿ, ಆಟೋ ಚಾಲಕರು ನಮ್ಮ ಮೇಲೆ ಇಟ್ಟಿರುವ ಅಭಿಮಾನ ಮತ್ತು ಗೌರವಕ್ಕೆ ಚಿರಋಣಿ. ಇನ್ನು ಮುಂದೆ ನಿಮ್ಮ ಸಂಘದ ಜೊತೆ ನಾನು ಕೂಡ ಒಬ್ಬ ಸದಸ್ಯನಾಗಿ ನೀವು ಮಾಡುವ ಸಮಾಜ ಸೇವೆಯಲ್ಲಿ ಮತ್ತು ಆಟೋ ಚಾಲಕರ ಸೇವೆಯಲ್ಲಿ ಭಾಗವಹಿಸುವುದರ ಜೊತೆಗೆ ನನ್ನ ಕೈಲಾದ ಸಹಾಯ, ಸಹಕಾರ ನೀಡುವೆ ಎಂದು ತಿಳಿಸಿದರು.


ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ತಾಲೂಕಾಧ್ಯಕ್ಷ ಮಂಜುನಾಥ ಅಗಸಿಮನಿ ವಹಿಸಿದ್ದರು. ಸಂಘದ ಪದಾಧಿಕಾರಿಗಳಾದ ಬಸವರಾಜ ಮನಗುಂಡಿ, ಅಬೂಬಕರ ಅಣ್ಣಿಗೇರಿ, ಹುಲಗೇಶ ಗೆಜ್ಜೆಳ್ಳಿ, ಮೋಹನ ಶಿಂಗಾಡಿ, ಅಮೀನಸಾಬ ರೋಣದ, ಗೋಪಾಲ ಗೋರ್ಲೆ, ಉದಯ ಪನ್ನೂರ, ವಿಜಯೇಂದ್ರ ವಡವಿ, ಶಮೀರ ಭಾವಿಕಟ್ಟಿ, ಗಂಗಾಧರ ಬೆನ್ನಹಾಳಮಠ, ಲಕ್ಷ್ಮಣ ಕಟ್ಟಿಮನಿ, ಮಾರುತಿ ಕಟ್ಟಿಮನಿ, ಅನಿಲ ಅಗಸಿಮನಿ, ಪರಶುರಾಮ ಗೌಳಿ, ರಮೇಶ ನೆಗಡೆ, ರಾಘವೇಂದ್ರ ಗೆಜ್ಜೆಳ್ಳಿ, ರಫೀಕ ಮುಳಗುಂದ, ಮನೋಹರ ಚಲವಾದಿ, ಯಮನೂರ ಕಾಳಗಿ, ಮಂಜುನಾಥ ಪೂಜಾರ, ಮುತ್ತು ಹೊಸಳ್ಳಿ, ವಿಕಾಸ ದೊಡ್ಡಮನಿ, ಸುರೇಶ ಪನ್ನೂರ ಹಾಗೂ ಕೆಎಸ್‌ಆರ್‌ಟಿಸಿ ಮಹಾಮಂಡಳದ ಅಧ್ಯಕ್ಷ ಬಿ.ಎಸ್. ರಾಮನಹಳ್ಳಿ ಮುಂತಾದವರಿದ್ದರು.

ಗಂಗಾಧರ ಬ್ಯಾಗೋಟಿ ಸ್ವಾಗತಿಸಿದರು. ಸುರೇಶ ಮಡಿವಾಳರ ನಿರೂಪಿಸಿದರು. ಈರಣ್ಣ ಗೆಜ್ಜೆಳ್ಳಿ ವಂದಿಸಿದರು.

## 'ವಿಶ್ವ ತಂಬಾಕು ರಹಿತ ದಿನಾಚರಣೆ' ಜಾಗೃತಿ ಜಾಥಾ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕಳಸಾಪೂರ ಗ್ರಾಮದ ಬಸವಕೇಂದ್ರ ಮತ್ತು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ವಿಶ್ವವಿದ್ಯಾಯಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ತಂಬಾಕು ರಹಿತ ದಿನದ ಪ್ರಯುಕ್ತ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿತ್ತು.



ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಬಸವಕೇಂದ್ರದ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಖಂಡಮ್ಮನವರ, ಬೀಡಿ, ಸಿಗರೇಟ, ಗುಟಕಾ, ಮಾದಕ ವಸ್ತುಗಳ ವಿರುದ್ಧದ ಹೋರಾಟ ಒಂದು ಚಳುವಳಿಯಾಗಬೇಕು. ಮಾದಕ ವಸ್ತುಗಳ ಮಾಯಜಾಲವನ್ನು ಅಡಗಿಸಿ, ಆರೋಗ್ಯಕರ ಬದುಕಿನತ್ತ ಮುನ್ನೆಡೆಯೋಣ ಎಂದರು.

ಜಾಥಾ ಕಾರ್ಯಕ್ರಮದಲ್ಲಿ ಸುರೇಶ ಲಮಾಣಿ, ಡಾ. ದಣಿಕುಮಾರ, ಕೃಷ್ಣಾ ದುರಗಪ್ಪನವರ, ಪಿಡಿಓ ಮಹೇಶ, ಗ್ರಾಮದ ಗುರುಹಿರಿಯರು, ಯುವಕರು ಪಾಲ್ಗೊಂಡಿದ್ದರು. ಜಾಥಾದಲ್ಲಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸುತ್ತಾ ದುಶ್ಚಟ, ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಘೋಷಣೆಗಳನ್ನು ಕೂಗಿದರು.

## ಸಾಧಕ ವಿದ್ಯಾರ್ಥಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಎಸ್‌ಸಿಎಸ್ ಶಿಕ್ಷಣ ಸಂಸ್ಥೆಯ ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ 2019-20ರ ಸಾಲಿನ ವಿದ್ಯಾರ್ಥಿಯಾದ ಪ್ರಣವ ಅಡಗಟ್ಟಿ ವಿಜ್ಞಾನ ವಿಭಾಗದಲ್ಲಿ ದ್ವಿತೀಯ ಪಿಯುಸಿಯನ್ನು ಅತ್ಯುತ್ತಮ ಶ್ರೇಣಿಯಲ್ಲಿ ಉತ್ತೀರ್ಣನಾಗಿದ್ದು, ತರುವಾಯ ಇನ್ಫಾರ್ಮೇಷನ್ ಸೈನ್ಸ್ ಪದವಿ ಪಡೆದು, ಕ್ಯಾಂಪಸ್ ಸಂದರ್ಶನದಲ್ಲಿ ಆಯ್ಕೆಯಾಗಿ ಈಗ ಜರ್ಮನಿಯ ಪ್ರಖ್ಯಾತ ಕಂಪನಿಯಲ್ಲಿ ಸಾಫ್ಟವೇರ್ ಇಂಜಿನಿಯರ್ ಆಗಿ ನೇಮಕವಾಗಿರುವ ಪ್ರಯುಕ್ತ ಕಾಲೇಜಿನ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಸಾಧಕ ವಿದ್ಯಾರ್ಥಿಯನ್ನು ಅಭಿನಂದಿಸಿ, ಶುಭ ಹಾರೈಸಿದರು. ಕಾರ್ಯಕ್ರಮದಲ್ಲಿ ಸನ್ಮಾರ್ಗ ಪ.ಪೂ ಮಹಾವಿದ್ಯಾಲಯದ ಚೇರ್ಮನ್ ಪ್ರೊ. ರಾಜೇಶ ಕುಲಕರ್ಣಿ, ನಿರ್ದೇಶಕರಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ್ ಒಡೆಯರ್, ಪ್ರೊ. ಪುನೀತ್ ದೇಶಪಾಂಡೆ, ಪ್ರೊ. ಸೈಯದ್ ಮತೀನ್ ಮುಲ್ಲಾ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ಉಪನ್ಯಾಸಕ ವೃಂದ ಹಾಗೂ ಮಹಾವಿದ್ಯಾಲಯದ ಸಿಬ್ಬಂದಿಗಳು ಉಪಸ್ಥಿತರಿದ್ದು ಅಭಿನಂದಿಸಿದರು.



## ಕೈಗಾರಿಕಾ ಅಭಿವೃದ್ಧಿ ನಿಗಮಕ್ಕೆ ಶೈಕ್ಷಣಿಕ ಭೇಟಿ




■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಕೈಮಗ್ಗ ಕ್ಷೇತ್ರವು ಅತಿದೊಡ್ಡ ಉದ್ಯಮವಾಗಿದೆ. ಇದು ಭಾರತೀಯ ಸಂಸ್ಕೃತಿಯನ್ನು ಸಂರಕ್ಷಿಸುವ ಸಂಪ್ರದಾಯವನ್ನು ಹೊಂದಿದ್ದು, ಭಾರತದ ಕೈಮಗ್ಗ ನೇಕಾರರು ತಮ್ಮ ವಿಶಿಷ್ಟವಾದ ನೇಯ್ಗೆ ಮತ್ತು ಮುದ್ರಣ ಶೈಲಿಗೆ ಜಾಗತಿಕವಾಗಿ ಹೆಸರುವಾಸಿಯಾಗಿದೆ ಎಂದು ಕೆ.ಡಿ.ಡಿ.ಸಿ ವ್ಯವಸ್ಥಾಪಕ ಚಂದ್ರಶೇಖರ ಬಾವಿಕಟ್ಟಿ ಹೇಳಿದರು.

ನಗರದ ಕೆ.ಎಲ್.ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಅಂತಿಮ ವರ್ಷದ ಗೃಹವಿಜ್ಞಾನ ಮತ್ತು ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳು ನರಸಾಪುರದಲ್ಲಿರುವ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮಕ್ಕೆ ಭೇಟಿ ನೀಡಿ ವಿವಿಧ ಪ್ರಕಾರದ ವಸ್ತ್ರ ನೇಯುವ ವಿಧಾನಗಳನ್ನು ವೀಕ್ಷಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ನೇಯ್ಗೆಗೆ ಅವಶ್ಯಕವಾದ ಕಚ್ಚಾವಸ್ತುಗಳ ಸಂಸ್ಕರಣೆ, ಉತ್ಪಾದನೆ, ಮಾರಾಟ, ತಂತ್ರಜ್ಞಾನ, ಕೈಮಗ್ಗದ ಗುರುತಿನ ಬಗ್ಗೆ ಹಾಗೂ ನೇಕಾರರಿಗೆ ಸರಕಾರದಿಂದ ದೊರಕುವ ಯೋಜನೆಗಳ ಕುರಿತಾದ ವಿವರವಾದ ಮಾಹಿತಿಯನ್ನು ಪಡೆದುಕೊಂಡರು.

ಮಹಾವಿದ್ಯಾಲಯದ ಪ್ರಚಾರ್ಯ ಡಾ.ಎ.ಕೆ. ಮಠ ಅವರ ನೇತೃತ್ವದಲ್ಲಿ ಭೇಟಿ ಕಾರ್ಯಕ್ರಮ ನೆರವೇರಿತು. ಗೃಹವಿಜ್ಞಾನ ವಿಭಾಗದ ಮುಖ್ಯಸ್ಥರಾದ ವೀಣಾ ತಿರ್ಲಾಪೂರ, ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಪ್ರೊ.ಹರ್ಷಾ ನಿಲುಗಲ್ ಮತ್ತು ಪ್ರೊ. ವಾಗೀಶ್ ರೇಶ್ಮಿ ವಿದ್ಯಾರ್ಥಿಗಳೊಂದಿಗೆ ಉಪಸ್ಥಿತರಿದ್ದರು.

ಪುರಾಣ ಕಾಲದಲ್ಲಿಯೇ ಗ್ರಾಮದ ಉಲ್ಲೇಖ । ಯಳವತ್ತಿಯ ಜಾಗೃತ ಕ್ಷೇತ್ರ

# ಶ್ರೀ ಗುಂಡೇಶ್ವರ ದೇವರ ಜಾತ್ರೆ ಇಂದು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಅನೇಕ ಗ್ರಾಮಗಳು ತಮ್ಮದೇ ಆದ ವೈಶಿಷ್ಟ್ಯತೆ ಹಾಗೂ ಇತಿಹಾಸವನ್ನು ಹೊಂದಿದ್ದು, ಯಳವತ್ತಿ ಗ್ರಾಮವೂ ಅವುಗಳಲ್ಲೊಂದು. ಈ ಗ್ರಾಮವು ಲಕ್ಷ್ಮೇಶ್ವರ ತಾಲೂಕಿನಲ್ಲಿಯೇ 2ನೇ ದೊಡ್ಡ ಗ್ರಾಮವಾಗಿದ್ದು, ಅತ್ಯಂತ ಪುರಾತನ ಇತಿಹಾಸವನ್ನು ಹೊಂದಿದೆ. ಇಲ್ಲಿನ ಜಾಗೃತ ಆರಾಧ್ಯ ದೇವನಾದ ಶ್ರೀ ಗುಂಡೇಶ್ವರ ದೇವರ ಜಾತ್ರೆ ಜೂನ್ 1ರಂದು ಅದ್ದೂರಿಯಾಗಿ ಜರುಗಲಿದೆ.

ಪುರಾಣ ಕಾಲದಲ್ಲಿಯೇ ಗ್ರಾಮದ ಉಲ್ಲೇಖ: 12ನೇ ಶತಮಾನದಲ್ಲಿಯೇ ಶ್ರೀ ಗುಂಡೇಶ್ವರ ದೇವಸ್ಥಾನದಲ್ಲಿ ಸಂಸ್ಕೃತ ಪಾಠಶಾಲೆ ನಡೆಯುತ್ತಿತ್ತು ಹಾಗೂ ಸಾವಿರಾರು ವಟುಗಳು ಇಲ್ಲಿ ವಾಸವಿದ್ದು ಹೋಮ-ಹವನ ಹಾಗೂ ಮಂತ್ರಾಭ್ಯಾಸ ಪಾಠಗಳನ್ನು ಕಲಿಯುತ್ತಿದ್ದರು ಎಂದು ಪುರಾಣ ಪುಟಗಳಲ್ಲಿ ಉಲ್ಲೇಖಿಸಲಾಗಿದೆ. ಇಲ್ಲಿನ ಪುರಾತನ ಕೋಟೆಯೂ ಸಹ ಯಳವತ್ತಿಯ ಇತಿಹಾಸ ಸಾರುತ್ತದೆ. ಇಲ್ಲಿನ ಗುಂಡೇಶ್ವರ ದೇವಸ್ಥಾನವು ಹೆಚ್ಚು ಜಾಗೃತ ಸ್ಥಳವಾಗಿದ್ದು, ನಾಡಿನ ಸಾವಿರಾರು ಭಕ್ತರು ಇಲ್ಲಿನ ದೇವರಿಗೆ ನಡೆದುಕೊಳ್ಳುತ್ತಾರೆ.

ಶಿಶುನಾಳ ಶರೀಫರು, ಗುರು ಗೋವಿಂದಭಟ್ಟರು ಕಾಲಿಟ್ಟ ನೆಲ: ಶ್ರೀ ಗುಂಡೇಶ್ವರ ದೇವಸ್ಥಾನಕ್ಕೆ ಸಂತ ಶಿಶುನಾಳ ಶರೀಫರು ಹಾಗೂ ಗುರು ಗೋವಿಂದಭಟ್ಟರು ದರ್ಶನಕ್ಕೆ ಆಗಮಿಸಿದಾಗ ಶರೀಫರು ಆಕಸ್ಮಿಕವಾಗಿ ನಾಗರ ಹಾವಿನ ಮೇಲೆ ಕಾಲಿಡುತ್ತಾರೆ. ತಕ್ಷಣ ಅವರ ಮೈಯೆಲ್ಲಾ ಬೆವರಿ ಭಯಪಟ್ಟು ಅಂದೇ ಯಾರೇ ವಿಷ ಜಂತುವಿನಿಂದ ಬಾಧೆಗೊಳಪಟ್ಟಲ್ಲಿ ಅಂತವರ ವಿಷ ನಿವಾರಣೆ ಆಗಲಿ ಎಂದು ಶ್ರೀ ಗುಂಡೇಶ್ವರ ದೇವಸ್ಥಾನದ ಮುಖ್ಯದ್ವಾರದಲ್ಲಿ ದೊಡ್ಡದಾದ ಚೌಕಾಕಾರದ ವಿಷನಿವಾರಣಾ ಕಲ್ಲಿನ ಹೊಸ್ತಿಲನ್ನು ಸ್ಥಾಪಿಸಿದರು. ಅಂದಿನಿಂದ ಈಗಲೂ ಸಹ ಸುತ್ತಮುತ್ತಲಿನ ಜನರು ವಿಷಜಂತುಗಳಿಂದ ಬಾಧೆಗೊಳಪಟ್ಟಲ್ಲಿ ಈ ದೇವಸ್ಥಾನಕ್ಕೆ ತಕ್ಷಣ ಬಂದು ಶ್ರೀ ಗುಂಡೇಶ್ವರನ ಪಾದೋದಕ ಸೇವಿಸಿದ ಅರೆಗಳಿಗೆಯಲ್ಲಿಯೇ ವಿಷ ಪರಿಹಾರವಾಗುತ್ತದೆ ಎಂಬ ಪ್ರತೀತಿ ಇದೆ.

## ವಿಶೇಷತೆ

ಇಲ್ಲಿನ ಇನ್ನೊಂದು ವಿಶೇಷವೆಂದರೆ ದೇವಸ್ಥಾನದ ಬಲಗಡೆ ಇರುವ ಬಾವಿ. ಈ ಬಾವಿಯ ನೀರು ದಿನದ ಮೂರು ಹೊತ್ತಿಗೆ ತಕ್ಕಂತೆ ತನ್ನ ಬಣ್ಣವನ್ನು ಬದಲಾಯಿಸುತ್ತದೆ. ಇದು ಶ್ರೀ ಗುಂಡೇಶ್ವರನ ಲೀಲೆಯಂದು ಪೂರ್ವಜರು ಹೇಳುತ್ತಾರೆ. ಶ್ರೀ ಗುಂಡೇಶ್ವರನ ಜಾತ್ರೆ ವರ್ಷದ ಕೊನೆಯ ಜಾತ್ರೆಯಾಗಿದ್ದು, ಶಿರಹಟ್ಟಿ ಫಕ್ಕಿರೇಶ್ವರ ಜಾತ್ರೆ ನಡೆದ 9ನೇ ದಿನ ಶುದ್ಧ ದಶಮಿಯಂದು ಈ ಜಾತ್ರೆ ನಡೆಯುತ್ತದೆ. ಜೂನ್ 1ರ ಸಂಜೆ 5.30ಕ್ಕೆ ಮಹಾರಥೋತ್ಸವವು ಅದ್ದೂರಿಯಾಗಿ ಜರುಗಲಿದ್ದು, ಜೂನ್ 2ರ ಸಂಜೆ 5.30ಕ್ಕೆ ಕಡುಬಿನಕಾಳಗ ನಡೆಯಲಿದೆ.

# 'ರಾಷ್ಟ್ರೀಯ ಲೋಕ ಅದಾಲತ್' ಜುಲೈ 13ಕ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ಗದಗ ಜಿಲ್ಲೆಯಲ್ಲಿ ಜುಲೈ 13ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಂಡಿದ್ದು ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ತಮ್ಮ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥ ಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ.

ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿ ಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ಬಸವರಾಜ ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಮ್ಎಮ್ಆರ್‌ಡಿ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿದೆ.

ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು.

ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಜುಲೈ 13ರಂದು ಜರುಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

'ವಿಶ್ವ ತಂಬಾಕು ರಹಿತ ದಿನಾಚರಣೆ'ಯ ಅಂಗವಾಗಿ ಜಾಗೃತಿ ಜಾಥಾ ಕಾರ್ಯಕ್ರಮ

# ತಂಬಾಕಿನಿಂದ ಆರೋಗ್ಯದ ಮೇಲೆ ದುಷ್ಪರಿಣಾಮ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ತಂಬಾಕು ರಹಿತ ದಿನಾಚರಣೆ ಪ್ರಯುಕ್ತ 'ತಂಬಾಕು ಉದ್ಯಮದ ಹಸ್ತಕ್ಷೇಪದಿಂದ ಮಕ್ಕಳನ್ನು ರಕ್ಷಿಸುವುದು' ಎಂಬ ಘೋಷಣೆಯೊಂದಿಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಮ್ಸ್, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಸಮೀಕ್ಷಾ ಘಟಕ, ಜಿಲ್ಲಾ ಆಯುಷ್ ಇಲಾಖೆ, ವೈದ್ಯಕೀಯ ವಿಜ್ಞಾನಗಳ ಸಂಘ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ, ಸ್ಫೂರ್ತಿ ಪ್ಯಾರಾ ಮೆಡಿಕಲ್ ಕಾಲೇಜು ಹಾಗೂ ಜಿಮ್ಸ್ ಪ್ಯಾರಾ ಮೆಡಿಕಲ್ ಕಾಲೇಜು ಗದಗ ಇವರ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ನಗರದ ಮುನ್ಸಿಪಲ್ ಕಾಲೇಜು ಆವರಣದಲ್ಲಿ ಜನಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ನಗರದ ಮುನ್ಸಿಪಲ್ ಕಾಲೇಜ ಆವರಣದಿಂದ ಆರಂಭಗೊಂಡು ಗಾಂಧೀ ಸರ್ಕಲ್, ಮಹೇಂದ್ರಕರ ಸರ್ಕಲ್, ಹಳೇ ಬಸ್ ನಿಲ್ದಾಣ, ರೋಟರಿ ಸರ್ಕಲ್ ಮೂಲಕ ಹಳೇ ಜಿಲ್ಲಾ ಆಸ್ಪತ್ರೆವರೆಗೆ ಜಾಥಾ ಹಮ್ಮಿಕೊಳ್ಳಲಾಯಿತು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ.ಎಸ್. ಶಿವನಗೌಡ್ರ



ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಾ, ಕೋಟ್ಪಾ ಕಾಯ್ದೆ ಪರಿಣಾಮಕಾರಿ ಅನುಷ್ಠಾನದ ಮೂಲಕ 'ತಂಬಾಕು ಉದ್ಯಮದ ಹಸ್ತಕ್ಷೇಪದಿಂದ ಮಕ್ಕಳ ರಕ್ಷಣೆ' ಮಾಡಲು ಸಾಧ್ಯವಿದೆ ಎಂದು ತಿಳಿಸಿದರು.

ಕಾರ್ಯಕ್ರಮಧಿಕಾರಿ ಹಾಗೂ ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಥೋಡ್ ಮಾತನಾಡಿ, ತಂಬಾಕು ವ್ಯಸನದಿಂದ ಆರೋಗ್ಯ ಮೇಲೆ ಬಹಳಷ್ಟು ದುಷ್ಪರಿಣಾಮಗಳು ಉಂಟಾಗುತ್ತವೆ. ಉದಾಹರಣೆಗೆ ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆಗಳು, ಪಾರ್ಶ್ವವಾಯು ಹಾಗೂ ತಂಬಾಕಿನಲ್ಲಿನ ನಿಕೋಟಿನ್ ಅಂಶ ರಕ್ತನಾಳಗಳಲ್ಲಿ ಸೇರಿ ದೇಹದ ಪ್ರತಿಯೊಂದು ಅಂಗದ ಮೇಲೆ ಪರಿಣಾಮ ಬಿರುತ್ತದೆ. ಈ ಕುರಿತು ನಿರಂತರ ಜಾಗೃತಿ ಕಾರ್ಯಕ್ರಮ, ತರಬೇತಿ ಕಾರ್ಯಕ್ರಮ, ಕೋಟ್ಪಾ ದಾಳಿ, ವ್ಯಸನಿಗಳಿಗೆ ಆಪ್ತ ಸಮಾಲೋಚನೆಯನ್ನು ಹಮ್ಮಿಕೊಳ್ಳಲಾಗುತ್ತಿದೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ, ಜಿ.ಪಂ ಯೋಜನಾ ನಿರ್ದೇಶಕ ಜಗದೇವಪ್ಪ ಬಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಬಿ.ಸಿ. ಕರಿಗೌಡರ, ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ.ಮೀನಾಕ್ಷಿ, ತಾಲೂಕು ಆರೋಗ್ಯಾಧಿಕಾರಿ ಡಾ. ಪ್ರೀತ ಖೋನಾ, ಉಪ ಪೊಲೀಸ್ ವರಿಷ್ಠಾಧಿಕಾರಿ ಸಂಕದ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಮ್.ವೈ. ಹೀರೆಮನಿಪಾಟೀಲ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ್ ಚವ್ಹಾನ್, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಗೋಪಾಲ ಸುರಪುರ, ಉಪ ಆರೋಗ್ಯ ಶಿಕ್ಷಣಾಧಿಕಾರಿ ಉಮೇಶ ಕರಮುಡಿ, ಜಿಮ್ಸ್ ಪ್ಯಾರಾ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳು, ಆರೋಗ್ಯ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿಗಳು ಭಾಗಹಿಸಿದ್ದರು. ಎಸ್. ಎಸ್. ಪೀರಾ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ತಂಬಾಕು ಕುರಿತಾದ ನೇರ/ಪರೋಕ್ಷ ಜಾಹಿರಾತುಗಳು, ಶಿಕ್ಷಣ ಸಂಸ್ಥೆಗಳ ಸುತ್ತಮುತ್ತ ತಂಬಾಕು ಉತ್ಪನ್ನಗಳ ಮಾರಾಟ ಮಾಡುವದು, ತಂಬಾಕು ಕಂಪನಿಗಳಿಂದ ಉಚಿತ ಉಡುಗೊರೆ ನೀಡುವ ಮೂಲಕ ಮಕ್ಕಳು ತಂಬಾಕು ವ್ಯಸನಕ್ಕೆ ಬಲಿಯಾಗುವದನ್ನು ತಪ್ಪಿಸಲು ಕ್ರಮ ವಹಿಸಬೇಕಾಗಿದೆ ಎಂದು ತಿಳಿಸಿದರು.

ಬಸ್ ನಿಲ್ದಾಣಾಧಿಕಾರಿ ಎಸ್.ಕೆ. ಅಯ್ಯನಗೌಡ್ರ ಸೇವಾ ನಿವೃತ್ತಿ

# ಅಯ್ಯನಗೌಡ್ರ ಕಿರಿಯರಿಗೆ ಮಾರ್ಗದರ್ಶನ ನೀಡಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಸಾರಿಗೆ ಸಂಸ್ಥೆಯ ಸಿಬ್ಬಂದಿಯ ಮೇಲೆ ಅತ್ಯಂತ ಗುರುತರವಾದ ಜವಾಬ್ದಾರಿಯಿದ್ದು, ನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ಕರ್ತವ್ಯ ನಿರ್ವಹಿಸಿ ಪ್ರಯಾಣಿಕರಿಗೆ ಸಾರಿಗೆ ಸೇವೆ ಒದಗಿಸಬೇಕೆಂದು ವಾಕರಸಾ ಸಂಸ್ಥೆಯ ಗದಗ ವಿಭಾಗೀಯ ನಿಯಂತ್ರಣಾಧಿಕಾರಿ ಡಿ.ಎಂ. ದೇವರಾಜ ಹೇಳಿದರು.

ಅವರು ಶುಕ್ರವಾರ ಗದುಗಿನ ಹೊಸ ಬಸ್‌ನಿಲ್ದಾಣದ ಆವರಣದಲ್ಲಿ ನಿಲ್ದಾಣಾಧಿಕಾರಿಯಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಎಸ್. ಕೆ. ಅಯ್ಯನಗೌಡ್ರ ಅವರಿಗೆ ಬೀಳ್ಕೊಡುವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸರಕಾರದ ಆದೇಶದನ್ವಯ ಗದಗ ವಿಭಾಗದಲ್ಲಿ ಬಸ್ ಸಂಚಾರವನ್ನು ನಿತ್ಯ ಕಟ್ಟುನಿಟ್ಟಾಗಿ ನಿರ್ವಹಿಸುತ್ತಿದ್ದು, ಪ್ರಯಾಣಿಕರಿಗೆ ಉತ್ತಮ ಸೇವೆ ನೀಡಲು ಸಾರಿಗೆ ಸಿಬ್ಬಂದಿ ತಿಂಗಳಲ್ಲಿ 24 ದಿನಗಳವರೆಗೆ ಕಡ್ಡಾಯ ಸೇವೆ ಸಲ್ಲಿಸಬೇಕು ಎಂದರು.

ಸೇವಾ ನಿವೃತ್ತಿ ಹೊಂದುತ್ತಿರುವ ಎಸ್. ಕೆ. ಅಯ್ಯನಗೌಡ್ರ ನಿಲ್ದಾಣಾಧಿಕಾರಿಯಾಗಿ, ಕಾರ್ಮಿಕ ಮುಖಂಡರಾಗಿ ಸೇವೆ ಸಲ್ಲಿಸಿ ಎಲ್ಲರ ಮೆಚ್ಚುಗೆಗೆ ಪಾತ್ರರಾದವರು. ಆಡಳಿತದಲ್ಲಿ ಅನುಭವವುಳ್ಳ ಅಯ್ಯನಗೌಡ್ರ ಕಿರಿಯರಿಗೆ ಮಾರ್ಗದರ್ಶನ ಮಾಡಲಿ ಎಂದರು.

ಮುಖ್ಯ ಅತಿಥಿಗಳಾಗಿ ಮುಖ್ಯ ಕಾರ್ಮಿಕ ಕಲ್ಯಾಣ ಅಧಿಕಾರಿ ಪಿ.ವೈ. ನಾಯಕ, ಬೆಂಗಳೂರಿನ ಅಖಿಲ ಕರ್ನಾಟಕ ಸಾರಿಗೆ ನೌಕರರ ಮಹಾಮಂಡಳಿಯ ಮಹಾ ಪ್ರಧಾನ ಕಾರ್ಯದರ್ಶಿ ಬಿ.ಜಯದೇವರಾಜೇ ಅರಸು, ಖಜಾಂಚಿ ಎನ್.ಆರ್. ದೇವರಾಜೇ ಅರಸು, ವಲಯ ಪ್ರಧಾನ ಕಾರ್ಯದರ್ಶಿ ಜಿ.ಪ್ರಕಾಶ ಮೂರ್ತಿ, ಕಾರ್ಮಿಕ ಮುಖಂಡ ರವಿಕಾಂತ ಅಂಗಡಿ ಎಸ್. ಕೆ. ಅಯ್ಯನಗೌಡ್ರ ಸೇವೆ ಬಗ್ಗೆ ಮಾತನಾಡಿದರು.

ವೇದಿಕೆಯ ಮೇಲೆ ಗಣ್ಯರಾದ ರಘು ಪುರುಷೋತ್ತಮ, ವಿವೇಕಾನಂದ ವಿಶ್ವಜ್ಞ, ಶಾಂತಣ್ಣ ಮುಳವಾಡ, ಡಿ.ಪ್ರಸಾದ, ರಾಮೇನಹಳ್ಳಿ, ಪಿ.ಎಂ. ತೆರದಾಳ, ಎಂ.ಆಂಜನೇಯ, ಗೋಪಾಲ ರಾಯರ್, ಹರೀಶ ಪೂಜಾರ, ಮಂಜುಳಾ ನಾಯಕ ಮುಂತಾದವರು ಉಪಸ್ಥಿತರಿದ್ದರು.

ರೇಣುಕಾ ಬೇಲೇರಿ ಪ್ರಾರ್ಥಿಸಿದರು, ಜಿ.ಬಿ. ಉಪ್ಪಿನ ಸ್ವಾಗತಿಸಿದರು. ಸಂತೋಷ ಕುಲಕರ್ಣಿ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಸಾರಿಗೆ ಸಂಸ್ಥೆಯ ಕಾರ್ಮಿಕ ಮುಖಂಡರು, ಕಾರ್ಮಿಕರು, ಅಭಿಮಾನಿಗಳು ಪಾಲ್ಗೊಂಡಿದ್ದರು.

ಎಸ್.ಕೆ. ಅಯ್ಯನಗೌಡ್ರ ದಂಪತಿಗಳನ್ನು ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಸಂಸ್ಥೆ ನನಗೆ ಅನ್ನ, ಅನುಭವ ನೀಡಿದೆ. ನಾಯಕತ್ವ ಗುಣ ಬೆಳೆಸಿದೆ. ಜೊತೆಗೆ ಜನಸಮುದಾಯದ ನಡುವೆ ಬದುಕುವ ಕಲೆಯನ್ನು ಕಲಿಸಿದೆ. ಸಂಸ್ಥೆ ಮತ್ತು ಕಾರ್ಮಿಕ ಬಂಧುಗಳ ಋಣ ನನ್ನ ಮೇಲಿದೆ. ಬರಲಿರುವ ದಿನಗಳಲ್ಲಿ ಕಾರ್ಮಿಕರ ಸೇವೆ ಮಾಡಿ ಋಣ ಮುಕ್ತನಾಗುವೆ ಎಂದರು.

ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್

# ಸಮಾಜಕ್ಕೆ ಉತ್ತಮ ಕೊಡುಗೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಕರೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆ, ಡಯಟ್ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಗದಗ ಶಹರ ವತಿಯಿಂದ ನಗರದ ಎಸ್.ಎಂ. ಕೃಷ್ಣ ನಗರದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ-12ರಲ್ಲಿ ಆಯೋಜಿಸಿದ್ದ 2024-25ನೇ ಸಾಲಿನ ಶಾಲಾ ಪ್ರಾರಂಭೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಿಗೆ ಪಠ್ಯ-ಪುಸ್ತಕ, ಸಮವಸ್ತ್ರ, ಬಿಸಿಯೂಟ ಹಾಗೂ ಆರೋಗ್ಯ ಕಾಪಾಡಿಕೊಳ್ಳಲು ಮಾತ್ರೆಗಳನ್ನು ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ನುಡಿದರು.

ಉಪನಿರ್ದೇಶಕ ಎಂ.ಎ. ರಡ್ಡೇರ ಪ್ರಾಸ್ತಾವಿಕವಾಗಿ ಮಾತನಾಡಿ, ಈಗಾಗಲೇ ಜಿಲ್ಲೆಯ ಎಲ್ಲ ಶಾಲೆಗಳಿಗೆ ಪಠ್ಯ-ಪುಸ್ತಕ ಹಾಗೂ ಸಮವಸ್ತ್ರಗಳನ್ನು ಪೂರೈಕೆ ಮಾಡಲಾಗಿದೆ. ಇಂದಿನ ದಿನವೇ ಪ್ರಾರಂಭೋತ್ಸವ ಮಾಡಿ ವಿದ್ಯಾರ್ಥಿಗಳಿಗೆ ಹಂಚಿಕೆ ಮಾಡುವಂತೆ ಎಲ್ಲ ಪ್ರಧಾನ ಗುರುಗಳಿಗೆ ತಿಳಿಸಲಾಗಿದೆ. ವಿದ್ಯಾರ್ಥಿಗಳನ್ನು ಶಾಲೆಗೆ ಹಾಜರಾಗುವಂತೆ ನೋಡಿಕೊಂಡು ಸರಕಾರದ ಹಾಗೂ ಇಲಾಖೆಯ ಉತ್ತೇಜಕಗಳನ್ನು ಮಕ್ಕಳಿಗೆ ತಲುಪಿಸುವಂತೆ ಮಾಡಿ ಹಾಜರಾತಿ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆಯೆಂದು ತಿಳಿಸಿದರು.

ಡಯಟ್ ಪ್ರಾಚಾರ್ಯ ಜಿ.ಎಲ್. ಬಾರಾಟಕ್ಕೆ, ಡಿವೈಪಿಸಿ ಎಂ.ಎಚ್. ಕಂಬಳಿ ಅಕ್ಷರ ದಾಸೋಹ ಶಿಕ್ಷಣಾಧಿಕಾರಿ ಎಸ್.ಡಿ. ಕನವಳ್ಳಿ, ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ, ರಾ.ಸ.ನೌ.ಸಂಘದ ಜಿಲ್ಲಾಧ್ಯಕ್ಷ ರವಿ ಗುಂಜಿಕರ, ಗದಗ ತಾ.ಪಂ ಕಾ.ನಿ ಅಧಿಕಾರಿ ಮಾಣಿಕರಾವ್, ಪ್ರೌ.ಶಾ.ಶಿ.ಸಂಘದ ಅಧ್ಯಕ್ಷ ಪಿ.ಎಚ್. ಕಡಿವಾಲ, ಪ್ರಾ.ಶಾ.ಶಿ.ಸಂಘದ ಅಧ್ಯಕ್ಷ ವಿ.ಎಂ. ಹಿರೇಮಠ, ಕೊಟ್ರೇಶ ವಿಭೂತಿ, ವಿವೇಕಾನಂದಗೌಡ ಪಾಟೀಲ, ಎಚ್. ಆರ್. ಕೋಣಿಮನಿ, ನಾಗರಳ್ಳಿ, ಶಾಲೆಯ ಶಿಕ್ಷಕ-ಸಿಬ್ಬಂದಿಗಳು ಉಪಸ್ಥಿತರಿದ್ದರು.

ವಿ.ಜಿ. ಪಾಟೀಲ ಪ್ರಾರ್ಥಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಸ್ವಾಗತಿಸಿದರು. ಶ್ರೀಯಾ ಸುಲ್ತಾನಪುರ, ಶಿವಾನಿ ಸಂಗಮದ ವಿದ್ಯಾರ್ಥಿನಿಯರು ಸಂವಿಧಾನ ಪೀಠಿಕೆ ಓದಿದರು. ಶಿಕ್ಷಕ ಹುಯಿಲಗೋಳ ಕಾರ್ಯಕ್ರಮ ನಿರೂಪಿಸಿದರು.



ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ ಎಸ್. ವಿದ್ಯಾರ್ಥಿಗಳಿಗೆ ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳನ್ನು ವಿತರಿಸಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಶಿಸ್ತು ಹಾಗೂ ಸಂಯಮ ಕಲಿಸುವುದರ ಜೊತೆಗೆ ಅಕ್ಷರದ ಮೂಲಕ ಅರಿವು ಮೂಡಿಸಿ ಭವ್ಯ ಭಾರತದ ಉತ್ತಮ ನಾಗರಿಕರಾಗುವಂತೆ ಮಾಡುವ ಜವಾಬ್ದಾರಿ ಶಿಕ್ಷಕರದ್ದಾಗಿದೆ. ಕಾಯಾ-ವಾಚಾ-ಮನಸಾ ಕಾರ್ಯನಿರ್ವಹಿಸಬೇಕೆಂದರು.

ಎಸ್.ಎ ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ 'ವಿಶ್ವ ತಂಬಾಕು ರಹಿತ ದಿನ' ಆಚರಣೆ

# ತಂಬಾಕು ಸೇವನೆಯಿಂದ ಆರೋಗ್ಯ ಹಾನಿ



■ವಿಜಯಸಾಕ್ಷಿ ಸುದ್ದಿ, ಗದಗ

ಯುವಕರು ತಂಬಾಕು ಉತ್ಪನ್ನಗಳ ಸೇವನೆಯಿಂದ ದೂರ ಉಳಿಯುವ ಮೂಲಕ ಸದೃಢ ಸಮಾಜ ನಿರ್ಮಾಣಕ್ಕೆ ಕಾರಣರಾಗಬೇಕಿದೆ. ವಿಶ್ವದಲ್ಲಿ ತಂಬಾಕು ಉತ್ಪನ್ನಗಳ ಸೇವನೆಯ ಒಂದೇ ಕಾರಣದಿಂದ ಪ್ರತಿವರ್ಷ ಲಕ್ಷಾಂತರ ಜನರು ಜೀವ ಕಳೆದುಕೊಳ್ಳುತ್ತಿರುವುದು ಅತ್ಯಂತ ಗಂಭೀರವಾದ ಸಂಗತಿಯಾಗಿದೆ ಎಂದು ಜಿಲ್ಲಾ ಆರೋಗ್ಯ ಇಲಾಖೆ ಅಧಿಕಾರಿ ಡಾ. ವೆಂಕಟೇಶ ರಾಠೋಡ ಹೇಳಿದರು.

ನಗರದ ಕೆಎಲ್‌ಇ ಸಂಸ್ಥೆಯ ಎಸ್.ಎ ಮಾನ್ವಿ ಕಾನೂನು ಮಹಾವಿದ್ಯಾಲಯದ ಎನ್‌ಎಸ್‌ಎಸ್ ಹಾಗೂ ಯೂತ್ ರೆಡ್ ಕ್ರಾಸ್ ಸಹಯೋಗದಲ್ಲಿ ಶುಕ್ರವಾರ ಜರುಗಿದ ವಿಶ್ವ ತಂಬಾಕು ರಹಿತ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮನುಷ್ಯನ ದೇಹದ ಮೇಲೆ ಅಲ್ಲದೆ ತಂಬಾಕು ಬೆಳೆ ಹೆಚ್ಚಳದಿಂದ ಪರಿಸರದ ಮೇಲೆಯೂ ದುಷ್ಪರಿಣಾಮ ಹೆಚ್ಚುತ್ತಿದೆ. ಅಧಿಕ ಇಳುವರಿ ಪಡೆಯುವ ಸಲುವಾಗಿ ಬೆಳೆಗಾರರು ಅಧಿಕ ಪ್ರಮಾಣದಲ್ಲಿ ರಾಸಾಯನಿಕ ಗೊಬ್ಬರ, ಕ್ರಿಮಿನಾಶಕಗಳನ್ನು ಬಳಸುತ್ತಿದ್ದಾರೆ. ತಂಬಾಕು ಸೇವನೆಯಿಂದ ಮನುಷ್ಯನ ಆರೋಗ್ಯ ತೀವ್ರಗತಿಯಲ್ಲಿ ಹದಗೆಡುವುದಕ್ಕೆ ಕಾರಣವಾಗುತ್ತಿದೆ. ಹಾಗಾಗಿ ಯುವಕರು, ವಿದ್ಯಾರ್ಥಿಗಳು ತಂಬಾಕು ಉತ್ಪನ್ನಗಳನ್ನು ಬಳಸುವುದಿಲ್ಲ ಎಂಬ ಸಂಕಲ್ಪ ಮಾಡಬೇಕಿದೆ. ಈ ವಿಷಯದಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ದಿಶೆಯಲ್ಲಿ ವಿದ್ಯಾರ್ಥಿಗಳು, ಸಂಘ-ಸಂಸ್ಥೆಗಳು ಸರ್ಕಾರದೊಂದಿಗೆ ಕೈಜೋಡಿಸಬೇಕಿದೆ ಎಂದರು.

ಪ್ರಾಚಾರ್ಯ ಜೈಹನುಮಾನ ಎಚ್.ಕೆ. ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಯುವ ಪೀಳಿಗೆ ಆಧುನಿಕ ಜೀವನ ಶೈಲಿಯಿಂದ ತಂಬಾಕು ಉತ್ಪನ್ನಗಳ ಸೇವನೆ ಮಾಡುತ್ತಿದ್ದು, ತಮ್ಮ ಉಜ್ವಲ ಭವಿಷ್ಯವನ್ನು ಕಳೆದುಕೊಳ್ಳುತ್ತಿದ್ದಾರೆ. ಆದ್ದರಿಂದ ವಿದ್ಯಾರ್ಥಿಗಳು ತಂಬಾಕು ಉತ್ಪನ್ನಗಳ ಸೇವನೆಯಿಂದ ದೂರವಿರುವಂತೆ ಸಲಹೆ ನೀಡಿದರು.

ಉಪನ್ಯಾಸಕರಾದ ಡಾ.ವಿಜಯ ಮುರದಂಡೆ, ಎಸ್.ಟಿ. ಮೂರಶಿಳ್ಳಿನ, ಶರತ್ ದರಬಾರೆ, ಡಾ. ಜ್ಯೋತಿ ಸಿ.ವಿ, ಡಾ. ಶ್ರೀನಿವಾಸ. ಪಿ ಸೇರಿದಂತೆ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಬಸವರಾಜ ಕರಡಿ ಪ್ರಾರ್ಥಿಸಿದರು. ದೈಹಿಕ ಶಿಕ್ಷಣ ನಿರ್ದೇಶಕ ಡಾ. ಸಿ.ಬಿ. ರಣಗಟ್ಟಿಮಠ ಸ್ವಾಗತಿ, ಪರಿಚಯಿಸಿದರು. ವಿದ್ಯಾರ್ಥಿನಿ ಮುಕ್ತಾ ಹಡಪದ ನಿರೂಪಿಸಿದರು.

# ಸಾಲಬಾದೆ ತಾಳಲಾರದೆ ರೈತ ಆತ್ಮಹತ್ಯೆ



■ವಿಜಯಸಾಕ್ಷಿ ಸುದ್ದಿ, ರೋಣ

ಸಾಲಬಾದೆ ತಾಳದೇ ರೈತನೋರ್ವ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಜರುಗಿದೆ.

ತಾಲೂಕಿನ ಸಂದಿಗವಾಡ ಗ್ರಾಮದ ಶಂಕರಪ್ಪ ಬೆಳಹಾರ (60) ಎಂಬ ರೈತನೆ ಸಾಲಬಾದೆ ತಾಳಲಾರದೆ ಶುಕ್ರವಾರ ಸಂಜೆ ಕ್ರಿಮಿನಾಶಕ ಔಷಧ ಸೇವಿಸಿ ಆತ್ಮಹತ್ಯೆ ಮಾಡಿಕೊಂಡ ದುರ್ದೈವಿ.

ಎಸ್ ಬಿಐ ಸೇರಿದಂತೆ ವಿವಿಧ ಬ್ಯಾಂಕ್ ಗಳಲ್ಲಿ ಸುಮಾರು 20 ಲಕ್ಷಕ್ಕೂ ಹೆಚ್ಚು ಸಾಲ ಇದೆ ಎನ್ನಲಾಗಿದೆ. ಜೊತೆಗೆ ಕೈ ಸಾಲವನ್ನು ಸಹ ಮಾಡಿಕೊಂಡಿದ್ದರು ಎಂದು ಗ್ರಾಮಸ್ಥರು ಮಾಹಿತಿ ನೀಡಿದ್ದಾರೆ.

ಸಾಲ ತಿರಿಸಲಾಗದೆ ಪ್ರತಿನಿತ್ಯ ಪರದಾಡುತ್ತಿದ್ದ ರೈತ ಶಂಕರಪ್ಪ ಜೀವನದಲ್ಲಿ ಜಿಗುಪ್ಸೆಗೊಂಡು ಕ್ರಿಮಿನಾಶಕ ಔಷಧವನ್ನು ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ರೋಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka